# ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 257 RNI Number : KNKAN/25/A2770 30-09-2026 Wednesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:257 ರಾಯಚೂರು 30-09-2026 ಬುಧವಾರ ಪುಟ 04 ಬೆಲೆ ರೂ.2/- ಮೊ:8660146563


# ಸಂಪುಟ ವಿಸ್ತರಣೆ : ಮೂವರಲ್ಲಿ ಇಬ್ಬರಿಗೆ ಅದೃಷ್ಟ ಗ್ಯಾರಂಟಿ..?

ಬೆಂಗಳೂರು, ಸೆ.29-

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ದೆಹಲಿಯಲ್ಲಿ ಕಾಂಗ್ರೆಸ್ ನಾಯಕರೊಂದಿಗೆ ರಾಜ್ಯ ಸಚಿವ ಸಂಪುಟ ವಿಸ್ತರಣೆ ಕುರಿತು ಮಹತ್ವದ ಚರ್ಚೆ ನಡೆಸಿದ್ದು, ಸಂಪುಟದಲ್ಲಿ ಖಾಲಿ ಇರುವ ಸ್ಥಾನಗಳಿಗೆ ವಿಧಾನ ಪರಿಷತ್‌ನ ನಾಲ್ಕು ಸ್ಥಾನಗಳಿಗೆ ಚುನಾವಣೆ ಮುಗಿದ ಬಳಿಕ ನಿಯೋಜನೆ ಮಾಡುವ ಸಾಧ್ಯತೆ ಇದೆ. ಖಾಲಿ ಇರುವ ಎರಡು ಸ್ಥಾನಗಳ ಪೈಕಿ ಒಂದನ್ನು ಪರಿಶಿಷ್ಟ ಪಂಗಡ ಹಾಗೂ ಮತ್ತೊಂದು ಸ್ಥಾನವನ್ನು ಕುರುಬ ಸಮುದಾಯಕ್ಕೆ ಮೀಸಲಿಡಲಾಗಿದೆ. ಈ ನಡುವೆ ಹಿರಿಯ ಶಾಸಕರ ಒತ್ತಡಕ್ಕೆ ಮಣಿದು ಬದಲಾವಣೆ ಮಾಡುವ ಸಾಧ್ಯತೆಗಳ ಬಗ್ಗೆ ಕೂಡ ಚರ್ಚೆಗಳಾಗಿವೆ.

ಈವರೆಗಿನ ಮಾಹಿತಿ ಪ್ರಕಾರ ಪರಿಶಿಷ್ಟ ಪಂಗಡದ ಕೋಟಾದ ಸ್ಥಾನಕ್ಕೆ ಸಂಡೂರು ಕ್ಷೇತ್ರದ ಶಾಸಕಿ ಅನ್ನಪೂರ್ಣ ತುಕಾರಾಂ ಅವರ ಹೆಸರು ಬಹುತೇಕ ಖಚಿತವಾಗಿದೆ. ಇದೇ ವೇಳೆ ಕುರುಬ ಸಮುದಾಯದಿಂದ ಹಾವೇರಿ ಜಿಲ್ಲೆಯ ಬ್ಯಾಡಗಿ ಕ್ಷೇತ್ರದ ಶಾಸಕ ಬಸವರಾಜ ಶಿವಣ್ಣನವರ್ ಅವರನ್ನು ಸಂಪುಟಕ್ಕೆ ಸೇರ್ಪಡೆಗೊಳಿಸುವ ಸಾಧ್ಯತೆ ಹೆಚ್ಚಿದೆ ಎನ್ನಲಾಗಿದೆ.

ಈ ನಡುವೆ ಮಾಜಿ ಸಚಿವ ಎಂ. ಕೃಷ್ಣಪ್ಪ ಅವರು ತಮಗೆ ಸಚಿವ ಸ್ಥಾನ ನೀಡಲೇಬೇಕು ಎಂದು ಪಟ್ಟು ಹಿಡಿದಿದ್ದಾರೆ. ಇಲ್ಲವಾದರೆ ತಮಗೆ ಪುತ್ರ ಹಾಗೂ ಶಾಸಕ ಪ್ರಿಯಂಕೃಷ್ಣ ಅವರಿಗಾದರೂ ಸಚಿವ ಸ್ಥಾನ ನೀಡಬೇಕು ಎಂದು ಅವರು ಒತ್ತಾಯಿಸಿದ್ದಾರೆ. ಪ್ರಸ್ತುತ ಪ್ರಿಯಕೃಷ್ಣ ಅವರು ದೆಹಲಿಯಲ್ಲೇ ಉಳಿದು ಸಚಿವ ಸ್ಥಾನಕ್ಕಾಗಿ ವರಿಷ್ಠರ ಮಟ್ಟದಲ್ಲಿ ಪ್ರಯತ್ನ ನಡೆಸುತ್ತಿದ್ದಾರೆ ಎಂದು ಮೂಲಗಳು ತಿಳಿಸಿವೆ.



ಈ ಹಿಂದೆ ವಿಧಾನ ಪರಿಷತ್ ಸದಸ್ಯೆ ಗಾಯತ್ರಿ ಶಾಂತೇಗೌಡ ಅವರ ಹೆಸರು ಕೂಡ ಸಂಪುಟ ವಿಸ್ತರಣೆಯ ಸಂದರ್ಭದಲ್ಲಿ ಪ್ರಸ್ತಾಪವಾಗಿತ್ತು. ಆದರೆ ಬಸವರಾಜ ಶಿವಣ್ಣನವರ್ ಅವರ ಹೆಸರನ್ನು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮುನ್ನೆಲೆಗೆ ತಂದಿದ್ದಾರೆ. ತಾವು ಸೂಚಿಸಿದವರ ಬದಲಿಗೆ ಬೇರೆ ಶಾಸಕರಿಗೆ ಅವಕಾಶ ನೀಡುವ ವಿಚಾರದಲ್ಲಿ ಸಿದ್ದರಾಮಯ್ಯ ಅವರು ಬಹಿರಂಗವಾಗಿ ಅಸಮಾಧಾನ ವ್ಯಕ್ತಪಡಿಸಿದ್ದರು.

ಮಹಿಳಾ ಕೋಟಾದಡಿ ಹಲವು ಶಾಸಕರ ಹೆಸರುಗಳು ಚರ್ಚೆಯಲ್ಲಿದ್ದರೂ, ಲಕ್ಷ್ಮೀ ಹೆಬ್ಬಾಳ್ಕರ್ ಅವರ ಹೆಸರು ಮುಂಚೂಣಿಯಲ್ಲಿತ್ತು. ನಯನಾ ಮೋಟಮ ಕೂಡ ಸಚಿವ ಸ್ಥಾನಕ್ಕಾಗಿ ಪೈಪೋಟಿ ನಡೆಸಿದ್ದರು.

ಈ ನಡುವೆ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿರುವ ಬಿ. ನಾಗೇಂದ್ರ ಅವರು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರುವುದರಿಂದ ತೆರವಾಗಿರುವ ಸ್ಥಾನವನ್ನು ಅದೇ ಸಮುದಾಯಕ್ಕೆ ನೀಡಬೇಕು ಎಂಬ ಒತ್ತಾಯವೂ ಕೇಳಿಬಂದಿದೆ.

ಮಹಿಳಾ ಪ್ರಾತಿನಿಧ್ಯ, ಪರಿಶಿಷ್ಟ ಪಂಗಡದ ಕೋಟಾ ಹಾಗೂ ಬಳ್ಳಾರಿ ಜಿಲ್ಲೆಗೆ ಪ್ರಾತಿನಿಧ್ಯ ನೀಡುವ ಉದ್ದೇಶದಿಂದ ಸಂಡೂರು ಶಾಸಕಿ ಅನ್ನಪೂರ್ಣ ತುಕಾರಾಂ ಅವರ ಹೆಸರನ್ನು ಪರಿಗಣಿಸಲಾಗುತ್ತಿದೆ ಎನ್ನಲಾಗಿದೆ. ಅನ್ನಪೂರ್ಣ ತುಕಾರಾಂ ಅವರು ಮೊದಲ ಬಾರಿಗೆ ಶಾಸಕರಾಗಿದ್ದರೂ, ಮಹಿಳಾ ಪ್ರಾತಿನಿಧ್ಯಕ್ಕೆ ಒತ್ತು ನೀಡಬೇಕು ಹಾಗೂ ಪ್ರಾದೇಶಿಕ ಮತ್ತು ಸಾಮಾಜಿಕ ಸಮತೋಲನ ಕಾಪಾಡಬೇಕು ಎಂಬ ಕಾರಣಕ್ಕೆ ಅವರ ಹೆಸರನ್ನು ಪರಿಗಣಿಸಲಾಗುತ್ತಿದೆ ಎಂದು ಮೂಲಗಳು ತಿಳಿಸಿವೆ.

ಸಚಿವ ಸಂಪುಟಕ್ಕೆ ಸೇರ್ಪಡೆಯಾಗಲು 30ಕ್ಕೂ ಹೆಚ್ಚು ಶಾಸಕರು ವಿವಿಧ ಹಂತಗಳಲ್ಲಿ ಪ್ರಯತ್ನ ನಡೆಸುತ್ತಿದ್ದಾರೆ. ಕೆಲವರು ದೆಹಲಿಯಲ್ಲಿ ತಂಗಿದ್ದು, ಮುಖ್ಯಮಂತ್ರಿ ಮತ್ತು ಮಾಜಿ ಮುಖ್ಯಮಂತ್ರಿ ಬೆನ್ನು ಬಿದ್ದಿದ್ದಾರೆ.ಅಂತಿಮವಾಗಿ ಇಬ್ಬರಿಗೆ ಮಾತ್ರ ಅವಕಾಶ ದೊರೆಯಲಿದೆ. ಹೀಗಾಗಿ ಸಂಪುಟಕ್ಕೆ ಸೇರ್ಪಡೆಯಾಗುವ ಆ ಇಬ್ಬರು ಶಾಸಕರು ಯಾರು ಎಂಬುದು ಇದೀಗ ಕಾಂಗ್ರೆಸ್ ವಲಯದಲ್ಲಿ ಕುತೂಹಲ ಮೂಡಿಸಿದೆ.

## ಪ್ರವಾಸಿ ತಾಣಗಳ ಸಂರಕ್ಷಣೆ ನಮ್ಮೆಲ್ಲರ ಆದ್ಯ ಕರ್ತವ್ಯ : ಡಿಸಿ ಪೂವಿತಾ ಎಸ್

ರಾಯಚೂರು,ಸೆ.29-

ಜಿಲ್ಲೆಯ ಪ್ರವಾಸಿ ತಾಣಗಳನ್ನು ಉಳಿಸಿ, ಬೆಳೆಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಪ್ರವಾಸೋದ್ಯಮವು ಒಂದು ಕಡೆ ದೇಶದ ಆರ್ಥಿಕತೆ ಹಾಗೂ ಸಂಸ್ಕೃತಿಯನ್ನು ಜಗತ್ತಿಗೆ ಪರಿಚಯಿಸಿದರೆ, ಮತ್ತೊಂದು ಕಡೆ ನಮ್ಮ ಇತಿಹಾಸ ಮತ್ತು ಪ್ರಕೃತಿಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುತ್ತದೆ ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್. ಹೇಳಿದರು.



ಸೆ. 29ರಂದು ರಾಯಚೂರಿನ ಬಸ್ ನಿಲ್ದಾಣದ ಸಮೀಪದಲ್ಲಿರುವ ಮೆಕ್ಕಾ ದರ್ವಾಜ ಕೋಟೆ ಆವರಣದಲ್ಲಿ ಜಿಲ್ಲಾಡಳಿತ, ರಾಯಚೂರು ಮಹಾನಗರ ಪಾಲಿಕೆ, ಪುರಾತತ್ವ, ವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಹಾಗೂ ಪ್ರವಾಸೋದ್ಯಮ ಇಲಾಖೆ, ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ಪ್ರವಾಸೋದ್ಯಮ ದಿನಾಚರಣೆ-2026ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರವಾಸಿ ತಾಣಗಳ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳುವುದು, ಪ್ರವಾಸಿಗರ ಸುರಕ್ಷತೆ ಮತ್ತು ಭದ್ರತೆಗೆ ಆದ್ಯತೆ ನೀಡುವುದು ಹಾಗೂ ಪ್ರಾಕೃತಿಕ ಮತ್ತು ಐತಿಹಾಸಿಕ ತಾಣಗಳನ್ನು ಸಂರಕ್ಷಿಸುವುದು ಅತ್ಯಗತ್ಯವಾಗಿದೆ. ಕರ್ನಾಟಕವು ಪ್ರವಾಸೋದ್ಯಮದ ದೃಷ್ಟಿಯಿಂದ ಅತ್ಯಂತ ಶ್ರೀಮಂತ ಹಾಗೂ ಐತಿಹಾಸಿಕ ಹಿನ್ನೆಲೆಯುಳ್ಳ ರಾಜ್ಯವಾಗಿದೆ ಎಂದರು.

ರಾಯಚೂರು ಜಿಲ್ಲೆಯು ಐತಿಹಾಸಿಕವಾಗಿಯೂ ಮಹತ್ವ ಹೊಂದಿದ್ದು, ಎರಡು ನದಿಗಳ ಮಧ್ಯದಲ್ಲಿರುವ ಸುಂದರ ಜಿಲ್ಲೆಯಾಗಿದೆ. ಮಸ್ಕಿಯಲ್ಲಿ ಅಶೋಕನ ಕಾಲದ ಐತಿಹಾಸಿಕ ತಾಣಗಳು ಸೇರಿದಂತೆ ಪ್ರವಾಸಿಗರು ಮೆಚ್ಚುವಂತಹ ಅನೇಕ ತಾಣಗಳು ಜಿಲ್ಲೆಯಲ್ಲಿವೆ. ಜಿಲ್ಲೆಯಲ್ಲಿ ಈಗಾಗಲೇ ಗುರುತಿಸಲಾಗಿರುವ 38 ಪ್ರವಾಸಿ ತಾಣಗಳನ್ನು ಪ್ರಸಿದ್ಧಿಗೊಳಿಸುವ ಸಲುವಾಗಿ ಸೂಚನಾ ಫಲಕಗಳನ್ನು ಅಳವಡಿಸಲಾಗುತ್ತಿದೆ. ಪ್ರತಿ ತಿಂಗಳು ಸರ್ಕಾರಿ ನೌಕರರ ಸಂಘ ಹಾಗೂ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ಮಕ್ಕಳನ್ನು ಪ್ರವಾಸಿ ತಾಣಗಳಿಗೆ ಕರೆದುಕೊಂಡು ಹೋಗಿ ಅವುಗಳ ಪರಿಚಯ ಮಾಡಿಕೊಡಲಾಗುತ್ತಿದೆ ಎಂದು ತಿಳಿಸಿದರು.

ಈಕೋ ಟೂರಿಸಂ ಅನ್ನು ಉತ್ತೇಜಿಸುವ ಮೂಲಕ ಪರಿಸರಕ್ಕೆ ಯಾವುದೇ ಹಾನಿಯಾಗದಂತೆ ಪ್ರವಾಸವನ್ನು ಆನಂದಿಸಬಹುದು. ಇದರ ಜೊತೆಗೆ ಸ್ಥಳೀಯ ಯುವಕರಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸಲು ಹಾಗೂ ಹೊಸ ಪ್ರವಾಸಿ ತಾಣಗಳನ್ನು ಅನ್ವೇಷಿಸಲು ಸಹಕಾರಿಯಾಗಲಿದೆ. ಪ್ರವಾಸಿ ತಾಣಗಳಿಗೆ ಭೇಟಿ ನೀಡುವ ಸಂದರ್ಭದಲ್ಲಿ ಪ್ಲಾಸ್ಟಿಕ್ ಬಾಟಲಿ ಹಾಗೂ ಇತರ ತ್ಯಾಜ್ಯಗಳನ್ನು ಎಲ್ಲೆಂದರಲ್ಲಿ ಬಿಸಾಡದೆ, ಅವುಗಳನ್ನು ಜವಾಬ್ದಾರಿಯುತವಾಗಿ ಹಿಂತಿರುಗಿ ತಂದು ವಿಲೇವಾರಿ ಮಾಡುವ ಮೂಲಕ ಜೀರೋ ವೇಸ್ಟ್ ಟ್ರೆಕ್ಕಿಂಗ್ ಅನ್ನು

3ನೇ ಪುಟ.....

## ಕಲ್ಬುರ್ಗಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪ್ರತಿಮೆ ಪುನರ್ ನಿರ್ಮಾಣಕ್ಕೆ ಆಗ್ರಹ

ರಾಯಚೂರು,ಸೆ.29-

ಕಲಬುರಗಿಯಲ್ಲಿ ತೆರವುಗೊಳಿಸಿರುವ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪ್ರತಿಮೆಯನ್ನು ಕೂಡಲೇ ಪುನರ್ ನಿರ್ಮಾಣ ಮಾಡಬೇಕು ಎಂದು ಕುರುಬ ಸಮಾಜದ ಮುಖಂಡ ಕುರಿ ಅಂಜನಪ್ಪ ಆಗ್ರಹಿಸಿದರು.



ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ, ಕಲಬುರಗಿಯಲ್ಲಿ ಸಿದ್ದರಾಮಯ್ಯ ಅವರ ಪ್ರತಿಮೆ ತೆರವುಗೊಳಿಸಿರುವುದನ್ನು ಖಂಡಿಸಿ ನಡೆಯುತ್ತಿರುವ ಹೋರಾಟಕ್ಕೆ ನಮ್ಮ ಬೆಂಬಲವಿದೆ. ಅಧಿಕಾರಿಗಳು ಕೂಡಲೇ ಪ್ರತಿಮೆಯನ್ನು ಪುನರ್ ನಿರ್ಮಿಸಿ ಪ್ರತಿಷ್ಠಾಪಿಸಬೇಕು ಎಂದು ಒತ್ತಾಯಿಸಿದರು.

ಸಿದ್ದರಾಮಯ್ಯ ಅವರು ಅಪ್ರತಿಮ ನಾಯಕರಾಗಿದ್ದು, ಎರಡು ಬಾರಿ ಮುಖ್ಯಮಂತ್ರಿಯಾಗಿ ರಾಜ್ಯದ ಜನರ ಪರ ಹಲವು ಜನಪರ ಕೆಲಸಗಳನ್ನು ಮಾಡಿದ್ದಾರೆ. ಅವರ ಗೌರವಾರ್ಥ ಕಲಬುರಗಿ ನಗರದ ಸರ್ಕಲ್‌ನಲ್ಲಿ ಪ್ರತಿಮೆ ಪ್ರತಿಷ್ಠಾಪಿಸಲಾಗಿತ್ತು. ಆದರೆ, ಏಕಾಏಕಿ ಮಹಾನಗರ ಪಾಲಿಕೆ ಅಧಿಕಾರಿಗಳು ಪ್ರತಿಮೆಯನ್ನು ತೆರವುಗೊಳಿಸಿರುವುದು ನಮ್ಮ ಸಮಾಜಕ್ಕೆ ಮಾಡಿದ ಅವಮಾನವಾಗಿದೆ ಎಂದು ಅವರು ಹೇಳಿದರು.

ರಾಯಚೂರು ನಗರದಲ್ಲಿಯೂ ಸಿದ್ದರಾಮಯ್ಯ ಅವರ ಪ್ರತಿಮೆಯನ್ನು ಉದ್ಯಾನವನದಲ್ಲಿ ಪ್ರತಿಷ್ಠಾಪಿಸುವ ಉದ್ದೇಶದಿಂದ ಈಗಾಗಲೇ ಮಹಾನಗರ ಪಾಲಿಕೆಗೆ ಅರ್ಜಿ ಸಲ್ಲಿಸಲಾಗಿದೆ. ಮುಂದಿನ ದಿನಗಳಲ್ಲಿ ಸೂಕ್ತ ಸ್ಥಳದಲ್ಲಿ ಪ್ರತಿಮೆ ಪ್ರತಿಷ್ಠಾಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಕುರಿ ಅಂಜನಪ್ಪ ಹೇಳಿದರು.

## ಮುಖ್ಯ ಚುನಾವಣಾ ಆಯುಕ್ತರನ್ನು ವಜಾಗೊಳಿಸಲು ಆಗ್ರಹಿಸಿ ಎಡಪಕ್ಷಗಳಿಂದ ಪ್ರತಿಭಟನೆ

ರಾಯಚೂರು: ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ವಿರುದ್ಧ ಕೇಳಿಬಂದಿರುವ




ಆರೋಪಗಳ ಹಿನ್ನೆಲೆಯಲ್ಲಿ ಸಿಪಿಐ(ಎಂ), ಸಿಪಿಐ, ಸಿಪಿಐ(ಎಂ-ಎಲ್) ಲಿಬರೇಷನ್ ಹಾಗೂ ಎಸ್‌ಯುಸಿಐ (ಕಮ್ಯುನಿಸ್ಟ್) ಪಕ್ಷಗಳ ನೇತೃತ್ವದಲ್ಲಿ ಸೋಮವಾರ ನಗರದ ಟಿಪ್ಪು ಸುಲ್ತಾನ್ ಗಾರ್ಡನ್ ಸಮೀಪ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯಲ್ಲಿ ಪಾಲ್ಗೊಂಡ ಮುಖಂಡರು ಮುಖ್ಯ ಚುನಾವಣಾ ಆಯುಕ್ತರ ಪ್ರತಿಕೃತಿಯನ್ನು ದಹಿಸಿ ಆಕ್ರೋಶ ವ್ಯಕ್ತಪಡಿಸಿದರು. ಚುನಾವಣಾ ಆಯೋಗದ ಕಾರ್ಯವೈಖರಿ ಹಾಗೂ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಎಡಪಕ್ಷಗಳ ಮುಖಂಡರು, ಸೆಪ್ಟೆಂಬರ್ 23ರಂದು ಪ್ರಕಟವಾದ ಇಂಡಿಯನ್ ಎಕ್ಸ್ ಪ್ರೆಸ್ ವರದಿಗಳನ್ನು ಉಲ್ಲೇಖಿಸಿ, ಚುನಾವಣಾ ಆಯೋಗದೊಳಗಿನ ನಿರ್ಧಾರ ಪ್ರಕ್ರಿಯೆ ಕುರಿತು ಗಂಭೀರ ಪ್ರಶ್ನೆಗಳು ಉದ್ಭವಿಸಿವೆ ಎಂದು ಹೇಳಿದರು.

3ನೇ ಪುಟ.....

## ನಾಡ ಹಬ್ಬ ದಸರಾ ಪೂರ್ವಭಾವಿ ಸಭೆ

## ಅರ್ಥಪೂರ್ಣವಾಗಿ ದಸರಾ ಆಚರಣೆಗೆ ಅಗತ್ಯ ಕ್ರಮಕ್ಕೆ ಆಯುಕ್ತ ಜುಬಿನ್ ಸೂಚನೆ

ರಾಯಚೂರು ಸೆಪ್ಟಂಬರ್ 29 ರಾಯಚೂರು ನಗರದಲ್ಲಿ ಅಕ್ಟೋಬರ್ 20ರ ಬೆಳಿಗ್ಗೆ 12.30ಕ್ಕೆ ನಾಡ ಹಬ್ಬ ದಸರಾ ಆಚರಣೆ ಹಿನ್ನೆಲೆಯಲ್ಲಿ ಇಂದು ಮಹಾನಗರ ಪಾಲಿಕೆಯ ಜೋನಲ್ 01ರ ಕಚೇರಿಯ ಸಭಾಂಗಣದಲ್ಲಿ ಪಾಲಿಕೆಯ ಆಯುಕ್ತರ ಅಧ್ಯಕ್ಷತೆ ಪೂರ್ವಭಾವಿ ಸಭೆ ಯಶಸ್ವಿಯಾಗಿ ಜರುಗಿತು.



ಈ ವೇಳೆ ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹೊಪಾತ್ರ, ಅವರು ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಕರ್ನಾಟಕ ವಿಧಾನ ಪರಿಷತ್ತಿಗೆ ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆ ಹಿನ್ನಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ. ಈ ಚುನಾವಣಾ ಮಾರ್ಗಸೂಚಿಗಳನ್ನು ಪಾಲಿಸುವ ಮೂಲಕ ರಾಯಚೂರು ನಗರದಲ್ಲಿ ಅರ್ಥಪೂರ್ಣ ಹಾಗೂ ಸಡಗರದಿಂದ ದಸರಾ ಆಚರಣೆಗೆ ಅಗತ್ಯ ಸಿದ್ದತೆ ಮಾಡಿಕೊಳ್ಳುವಂತೆ ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ದಸರಾ ಹಬ್ಬದ ಅಂಗವಾಗಿ ಅಕ್ಟೋಬರ್ 20ರ ಬೆಳಿಗ್ಗೆ 12:30 ಗಂಟೆಗೆ ರಾಯಚೂರು ಮಹಾನಗರ ಪಾಲಿಕೆ ಜೋನಲ್ 01ರ ಕಚೇರಿಯಿಂದ ಮೆರವಣಿಗೆಯನ್ನು ಪ್ರಾರಂಭ ಮಾಡಿ,ಸಾಯಂಕಾಲ 6ಗಂಟೆಗೆ ಬನ್ನಿ ಮಂಟಪ ತಲುಪುವುದು. ಇದಕ್ಕಾಗಿ ನಾಡದೇವಿ ಮಾತೆಯ ಭಾವಚಿತ್ರ ಮೆರವಣಿಗೆಗೆ ಅಗತ್ಯ ಸಿದ್ದತೆ ಮಾಡಿಕೊಳ್ಳುವಂತೆ ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಬನ್ನಿ ಮಂಟಪದಲ್ಲಿ ದೀಪಾಲಂಕಾರ, ಶ್ಯಾಮಿಯಾನ್, ಚೆರ್ ಮತ್ತು ಕಚೇರಿಯಲ್ಲಿ ಶಾಮಿಯಾನ, ಚೇರ್, ದೀಪಾಲಂಕಾರ ಹಾಗೂ ಮೆರವಣಿಗೆಯಲ್ಲಿ ಸೌಂಡ್ ಸಿಸ್ಟಮ್ ವ್ಯವಸ್ಥೆಯನ್ನು ಕೈಗೊಳ್ಳಬೇಕು. ದಸರಾ ಮೆರವಣಿಗೆಯಲ್ಲಿ ಸರ್ಕಾರಿ ಅಥವಾ ಖಾಸಗಿ ಶಾಲೆಗಳಿಂದ ಸಂಬಧಪಟ್ಟ ಶಿಕ್ಷಕರ ವತಿಯಿಂದ ತಂಡವನ್ನು ರಚಿಸಿ ಸುಮಾರು 15 ಗುಂಪುಗಳನ್ನು (ತಂಡ) ರಚಿಸಲು ಸೂಕ್ತ ನಿರ್ದೇಶನವನ್ನು ಆಯಾ ಶಾಲೆಯ ಮುಖ್ಯಸ್ಥರಿಗೆ ನೀಡಬೇಕು. ಈ ದಸರಾ ಮೆರವಣಿಗೆಯಲ್ಲಿ ಸಾಂಸ್ಕೃತಿ ಕಲಾಪ್ರದರ್ಶನ ಮಾಡಬೇಕೆಂದರು.

ದಸರಾ ಆಚರಣೆಗೆ ರಾಯಚೂರು ಸಾರ್ವಜನಿಕರು ಸೂಕ್ತ ಸಲಹೆಗಳನ್ನು ನೀಡುವ ಮೂಲಕ ಜೊತೆಗೆ ತಾವೂ ಕೂಡ ಕೈಜೋಡಿಸಿ ಹೇಗೆ ಸಹಾಯ ಮಾಡಬಹುದು ಎಂಬುದನ್ನು ತಿಳಿಸಬೇಕು. ಬರಗಾಲದ ಪರಿಸ್ಥಿತಿ ಮತ್ತು ನಗರ ವ್ಯಾಪ್ತಿಯಲ್ಲಿ ಕುಡಿಯುವ ನೀರಿನ ವಿವಿಧ ಸಮಸ್ಯೆಗಳನ್ನು ಗುರುತಿಸಿ ಅವುಗಳಿಗೆ ಪರಿಹಾರ ನೀಡಲಾಗುವುದು. ಅಲ್ಲದೆ ಮೂಲಭೂತ ಸೌಕರ್ಯಗಳಿಗೆ ಪಾಲಿಕೆಯ ಅನುದಾನ ಲಭ್ಯತೆಗೆ ತಕ್ಕಂತೆ ಕೆಲಸಗಳಿಗೆ ಪ್ಲಾನ್ ಮಾಡಬೇಕಾಗುತ್ತದೆ ಎಂದರು.

ಸದರಿ ದಿನಾಂಕದದು ಮಹಾನಗರ

3ನೇ ಪುಟ.....


## ಕೃಷಿ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಇಂಜಿನಿಯರ್ಸ್ ದಿನ ಆಚರಣೆ

ರಾಯಚೂರು ಸೆಪ್ಟಂಬರ್ 29

ಕರ್ನಾಟಕದಲ್ಲಿ ಜನಿಸಿದ ಹೆಸರಾಂತ ಇಂಜಿನಿಯರ್ ಸರ್ ಎಂ.ವಿಶ್ವೇಶ್ವರಯ್ಯನವರ ತಂತ್ರಾಶಗಳು ಮತ್ತು ಅಮೆರಿಕಾದಲ್ಲಿ ಜನಿಸಿದ ಹೆಸರಾಂತ ಕೃಷಿ ವಿಜ್ಞಾನಿ ಪ್ರೊಫೆಸರ್ ಮೇಸನ್ ವಾಗ್ ಅವರ ಕೃಷಿ ಆಧಾರಿತ ಆಶಯಗಳೊಂದಿಗೆ ಈ ಮಹಾವಿದ್ಯಾಲಯ ನಡೆಯುತ್ತಿರುವುದು ತುಂಬಾ ಮೆಚ್ಚುಗೆಯಾದಂತ ಮತ್ತು ಸ್ಮರಿಸುವಂತಹ ವಿಷಯವಾಗಿದೆ ಎಂದು ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆ ರಾಯಚೂರಿನ ನಿರ್ದೇಶಕರಾದ ಡಾ. ಹರೀಶ್ ಕುಮಾರ್ ಸರ್ದಾನ ಅವರು ಹೇಳಿದರು.

ಸೆಪ್ಟಂಬರ್ 29ರ ಮಂಗಳವಾರ ದಂದು ನಗರದ ಕೃಷಿ ತಾಂತ್ರಿಕ ಮಹಾವಿದ್ಯಾಲಯ ರಾಯಚೂರು ಆಯೋಜಿಸಿದ ಇಂಜಿನಿಯರ್ಸ್ ದಿನ-2026ರ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಅವರು ಮಾತನಾಡಿದರು.

ಇಂದಿನ ಕಾಲದ ವಿದ್ಯಾರ್ಥಿಗಳಿಗೆ ಕೇವಲ ತಾಂತ್ರಿಕತೆ ಮಾತ್ರವಲ್ಲ. ಅದರ ಹಿಂದಿನ ವಿಜ್ಞಾನವನ್ನು ಕೂಡ ತಿಳಿದುಕೊಳ್ಳಬೇಕು. ಅವಾಗ ಮಾತ್ರ ಪ್ರತಿಯೊಂದು ಸಮಸ್ಯೆಗೆ ಉತ್ತರವನ್ನು ತಂತ್ರಜ್ಞಾನ ರೂಪದಲ್ಲಿ ಹೊರ ತರಲು ಸಾಧ್ಯವಾಗುತ್ತದೆ. ಮುಂದಿನ ದಿನಗಳಲ್ಲಿ ಭಾರತೀಯ ಮಾಹಿತಿ ತಂತ್ರಜ್ಞಾನ ಸಂಸ್ಥೆ ರಾಯಚೂರು ಕೃಷಿ ತಾಂತ್ರಿಕ ಮಹಾವಿದ್ಯಾಲಯ ರಾಯಚೂರಿನ ಸಹಯೋಗದಲ್ಲಿ ಕೃಷಿಯಲ್ಲಿ ತಂತ್ರಜ್ಞಾನಗಳ ಬಳಕೆಯ ಬಗ್ಗೆ ಕಾರ್ಯ ಚಟುವಟಿಕೆಗಳನ್ನು ಮಾಡಲು ಇಚ್ಚಿಸುತ್ತಿದೆ ಎಂದು ಹೇಳಿದರು.





ಕಾರ್ಯಕ್ರಮದಲ್ಲಿ ವಿಶೇಷ ಅತಿಥಿಗಳಾಗಿ ಭಾಗವಹಿಸಿದ ಇಂಜಿನಿಯರ್ ವಿದ್ಯಾಸಾಗರ್ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸದ ಸಮಯದಲ್ಲಿಯೇ ಜೀವನಕ್ಕೆ ಬೇಕಾಗುವ ಒಂದು ನಿರ್ದಿಷ್ಟ ಗುರಿಯನ್ನು ಇಟ್ಟುಕೊಂಡು ಆ ಗುರಿಯನ್ನು ತಲುಪುವ ನಿಟ್ಟಿನಲ್ಲಿ ವಿದ್ಯಾಭ್ಯಾಸ ಮಾಡಬೇಕು. ಹಾಗೂ ಕೃಷಿ ಇಂಜಿನಿಯರಿಗ್ ವಿಭಾಗದಲ್ಲಿ ನಿಮ್ಮ ವಿಶೇಷತೆಯನ್ನು ಗುರುತಿಸಿಕೊಳ್ಳುವ ನಿಟ್ಟಿನಲ್ಲಿ ಅಭ್ಯಾಸ ಮಾಡಬೇಕೆಂದು ಹೇಳಿದರು. ಕಾಲೇಜಿನ ಹಳೆ ವಿದ್ಯಾರ್ಥಿಯಾದ ಇಂಜಿನಿಯರ್ ಧರೆಪ್ಪ ಸಿದ್ದಾಪುರ ಮುಧೋಳ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ಪ್ರೈವೇಟ್ ಸಂಸ್ಥೆಗಳಲ್ಲಿ ಕೆಲಸ ಮಾಡುವುದಕ್ಕಿಂತ ನಮ್ಮ ಸ್ವಂತ ಭೂಮಿಯಲ್ಲಿ ಕೃಷಿಯನ್ನು ಮಾಡಿ ನಾವೇ ಉದ್ಯಮಿಯಾಗಿ ಬೆಳೆಯಬೇಕು. ಅಲ್ಲದೆ ತಮ್ಮ ಜೀವನದ ಅನುಭವಗಳನ್ನು ಹೇಳಿ ವಿದ್ಯಾರ್ಥಿಗಳಿಗೆ ಕೃಷಿ ಮಾಡುವ ಬಯಕೆಯನ್ನು ಹೆಚ್ಚಿಸುವ ರೀತಿಯಲ್ಲಿ ಮಾತನಾಡಿದರು.

ವಿಶೇಷ ಅತಿಥಿಗಳಾದ ಇಂಜಿನಿಯರ್ ಅಶ್ವಿನಿ ಐನಾಪುರ ಅವರು ಮಾತನಾಡಿ, ಮಹಿಳಾ ಅಭ್ಯರ್ಥಿಗಳಿಗೆ ಟ್ರ್ಯಾಕ್ಟರ್ ಸಂಸ್ಥೆಗಳಲ್ಲಿ ಕೆಲಸ ಮಾಡುವುದು ತುಂಬಾ ಕಷ್ಟದಾಯಕವಾಗಿರುತ್ತದೆ. ಆದರೆ ಕೆಲಸ ಮಾಡುವ ಛಲದ ಮನೋಭಾವನೆಯನ್ನು ಹೊಂದಿದರೆ ಸಮಾಜದಲ್ಲಿ ಇರುವ ಯಾವುದೇ ಕಟ್ಟಲೆಗಳು ನಮಗೆ ಅಡ್ಡಿಯಾಗುವುದಿಲ್ಲ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೃಷಿ ತಾಂತ್ರಿಕ ಮಹಾವಿದ್ಯಾಲಯದ ಡೀನ್ ಡಾ. ಕೆ.ವಿ. ಪ್ರಕಾಶ್ ಅವರು ವಹಿಸಿ ಮಾತನಾಡಿ, ಬೇರೆ ಬೇರೆ ವಿಭಾಗಗಳ ಇಂಜಿನಿಯರಿಗ್ ಗಳಿಗಿಂತ ಕೃಷಿ ತಾಂತ್ರಿಕ ವಿಭಾಗವು ಅತ್ಯಂತ ಉನ್ನತ ಸ್ಥಾನವನ್ನು ಪಡೆಯುತ್ತದೆ

3ನೇ ಪುಟ.....



## ಸಿಂಧನೂರಿನಲ್ಲಿ ಹಾನಗಲ್ಲ ಶ್ರೀಗಳ ಜಯಂತಿ ಮಹೋತ್ಸವ : ಭಕ್ತಿ ಭಾವದಿಂದ ನಡೆದ ಪಾದಯಾತ್ರೆ

ಸಿಂಧನೂರು :29-09-2026 ಸಿಂಧನೂರು. ಪೂಜ್ಯಶ್ರೀ ಲಿಂ. ಹಾನಗಲ್ಲ ಶ್ರೀ ಕುಮಾರ ಮಹಾಶಿವಯೋಗಿಗಳವರ 159ನೇ ಜಯಂತಿ ಮಹೋತ್ಸವದ ಅಂಗವಾಗಿ. ಸಿಂಧನೂರು ನಗರದಲ್ಲಿ ಭಕ್ತಿ ಭಾವದಿಂದ ಪಾದ್ರಯಾತ್ರೆ ಜರುಗಿತು. ನಗರದ ರಾಮ ಕಿಶೋರ್ ಕಾಲೋನಿ. ಶರಣಬಸವೇಶ್ವರ ಕಾಲೋನಿ. ಹಾಗೂ ಪ್ರಶಾಂತ್ ನಗರ ಸೇರಿದಂತೆ ವಿವಿಧ ಬಡಾವಣೆಗಳಲ್ಲಿ ಪಾದಯಾತ್ರೆ ಸಂಚರಿಸಿತು. ಕುಂಭ - ಕಳಸ. ಡೊಳ್ಳು. ತಮಟೆ ಸೇರಿದಂತೆ ವಿವಿಧ ವಾದ್ಯಗಳೊಂದಿಗೆ ಭಕ್ತರು ಹಾಗೂ ಮಾಜಿ ಸಚಿವರಾದ ವೆಂಕಟರಾವ್ ನಾಡಗೌಡ ಉತ್ಸಾಹದಿಂದ ಪಾಲ್ಗೊಂಡಿದ್ದರು. ಈ ಪಾದಯಾತ್ರೆಯ ಸಂದರ್ಭದಲ್ಲಿ. ಹಳೆ ಮೇನ್ ಬಜಾರಿನ. ಶಾಹಿನ ಜುವೆಲರ್ಸ್ ಮಾಲಕರಾದ. ಕೆ. ಫಿರೋಜ್‌ಅಹ್ಮದ್. ಅವರ ವತಿಯಿಂದ. ಶ್ರೀಗಳ ಪಾದಯಾತ್ರೆಯಲ್ಲಿ ಪಾಲ್ಗೊಂಡವರಿಗೆ ಸನ್ಮಾನ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಮುಸ್ಲಿಂ ಸಮಾಜದ ಮುಖಂಡರು ಹಾಗೂ ವಿವಿಧ ಸಮಾಜದ ಮುಖಂಡರು ಪರಸ್ಪರ

3ನೇ ಪುಟ.....

# ರೇಬಿಸ್ ಮುಕ್ತ ಸಮಾಜ ನಿರ್ಮಾಣಕ್ಕೆ ಒನ್ ಹೆಲ್ತ್ ಪರಿಕಲ್ಪನೆ ಅಗತ್ಯ



ಕಲಬುರಗಿ,ಸೆ.29-

ಮಾನವ, ಪ್ರಾಣಿ-ಪಕ್ಷಿ ಹಾಗೂ ಪರಿಸರದ ಆರೋಗ್ಯ ಪರಸ್ಪರ ಬೆಸೆದುಕೊಂಡಿದ್ದು, ಎಲ್ಲದರ ಆರೋಗ್ಯವನ್ನು ಸಮಗ್ರವಾಗಿ ಪರಿಗಣಿಸುವ ಒನ್ ಹೆಲ್ತ್ ಪರಿಕಲ್ಪನೆಯ ಮೂಲಕ ರೇಬಿಸ್ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಎಸ್. ಸಂಕನೂರ ಹೇಳಿದರು.

ನಗರದ ಹೊಸ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾ ಪಂಚಾಯಿತಿ, ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಹಾಗೂ ಕರ್ನಾಟಕ ಪಶುವೈದ್ಯಕೀಯ ಸಂಘದ ಕಲಬುರಗಿ ಘಟಕದ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ರೇಬಿಸ್ ದಿನಾಚರಣೆ2026 ಅಂಗವಾಗಿ ಜಿಲ್ಲೆಯ ಪಶುವೈದ್ಯರಿಗೆ ಹಮ್ಮಿಕೊಂಡಿದ್ದ ಒಂದು ದಿನದ ತಾಂತ್ರಿಕ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮಾನವರು, ಪ್ರಾಣಿ-ಪಕ್ಷಿಗಳು ಹಾಗೂ ಪರಿಸರದ ಆರೋಗ್ಯ ಒಂದಕ್ಕೊಂದು ಅವಿನಾಭಾವ ಸಂಬಂಧ ಹೊಂದಿವೆ. ಒಂದರಲ್ಲಿ ಏರುಪೇರಾದರೂ ಅದರ ಪರಿಣಾಮ ಇಡೀ ಪರಿಸರದ ಸಮತೋಲನದ ಮೇಲೆ ಬೀರುತ್ತದೆ. ಪ್ರಕೃತಿ ಮತ್ತು ಪ್ರಾಣಿಗಳು ಆರೋಗ್ಯವಾಗಿದ್ದಾಗ ಮಾತ್ರ ಮಾನವ ಸಮಾಜವೂ ಸುರಕ್ಷಿತವಾಗಿರಲು ಸಾಧ್ಯ ಎಂದು ತಿಳಿಸಿದರು.

ರೇಬಿಸ್ ಲಸಿಕೆಯನ್ನು ಸಂಶೋಧಿಸಿದ ವಿಜ್ಞಾನಿ ಲೂಯಿ ಪಾಶ್ಚರ್ ಅವರ ಸ್ಮರಣಾರ್ಥ ವಿಶ್ವ ರೇಬಿಸ್ ದಿನ ಆಚರಿಸಲಾಗುತ್ತದೆ. ರೇಬಿಸ್ ಶೇ.100ರಷ್ಟು ಮಾರಕ ರೋಗವಾದರೂ, ಶೇ.100ರಷ್ಟು ತಡೆಗಟ್ಟಬಹುದಾದ ಕಾಯಿಲೆಯಾಗಿದೆ. ನಾಯಿ, ಬೆಕ್ಕು ಸೇರಿದಂತೆ ಸೋಂಕಿತ ಪ್ರಾಣಿಗಳ ಕಚ್ಚುವಿಕೆಯಿಂದ ರೋಗ ಹರಡಬಹುದಾಗಿದ್ದು, ಸಮಯಕ್ಕೆ ಸರಿಯಾಗಿ ಆಂಟಿ-ರೇಬಿಸ್ ಲಸಿಕೆ ಪಡೆಯುವುದರಿಂದ ಜೀವ ಉಳಿಸಬಹುದು ಎಂದು ಹೇಳಿದರು.

ಜಿಲ್ಲೆಯ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ರೇಬಿಸ್ ಲಸಿಕೆ ಲಭ್ಯವಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು. ವಿವಿಧ ಇಲಾಖೆಗಳು ಹಾಗೂ ಸ್ಥಳೀಯ ಸಂಸ್ಥೆಗಳ ಸಮನ್ವಯದೊಂದಿಗೆ ರೇಬಿಸ್ ಮುಕ್ತ ವಾತಾವರಣ ನಿರ್ಮಿಸಲು ನಿರಂತರ ಪ್ರಯತ್ನ ಅಗತ್ಯ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿಶ್ವ ರೇಬಿಸ್ ದಿನಾಚರಣೆಯ ಪೋಸ್ಟರ್ ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪಶುಪಾಲನಾ ಇಲಾಖೆಯ ಉಪನಿರ್ದೇಶಕ (ಆಡಳಿತ) ಡಾ. ಸಂಜಯ ರೆಡ್ಡಿ ಮಾತನಾಡಿ, ಮಾನವ ಪ್ರಾಣಿ ಸಂಘರ್ಷ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಬೀದಿ ನಾಯಿಗಳ ನಿಯಂತ್ರಣ ಹಾಗೂ ರೇಬಿಸ್ ಕುರಿತು ಜನರಲ್ಲಿ ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದರು. ಕಲಬುರಗಿಯಲ್ಲಿ ಬೀದಿ ನಾಯಿಗಳ ಸಂತಾನ ನಿಯಂತ್ರಣಕ್ಕಾಗಿ ದೊಡ್ಡ ಪ್ರಮಾಣದ ಎಬಿಸಿ ಕೇಂದ್ರ ಆರಂಭಿಸುವ ಕಾರ್ಯ ನಡೆಯುತ್ತಿದೆ. ಪಶುವೈದ್ಯರ ಕೊರತೆ ನೀಗಿಸಲು ಪೇಡ್ ಸರ್ವಿಸ್ ಮಾದರಿಯಲ್ಲಿ ವೈದ್ಯರ ಸೇವೆ ಬಳಸಿಕೊಳ್ಳುವ ಕುರಿತು ಜಿಲ್ಲಾಧಿಕಾರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ಕಲಬುರಗಿ ಪಶುವೈದ್ಯಕೀಯ ತರಬೇತಿ ಕೇಂದ್ರದ ಉಪನಿರ್ದೇಶಕ ಡಾ. ದಯಾನಂದ ಹಕ್ಕಪಿಕ್ಕಿ ಮಾತನಾಡಿ, ರೇಬಿಸ್ ಮುಕ್ತ ವಾತಾವರಣ ನಿರ್ಮಿಸಲು ಪಶುಸಂಗೋಪನೆ, ಆರೋಗ್ಯ ಇಲಾಖೆ ಹಾಗೂ ಸ್ಥಳೀಯ ಸಂಸ್ಥೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದರು.

ಬೆಂಗಳೂರು ಮೂಲದ ಸಂಸ್ಥೆ ಪ್ರತಿದಿನ 20ರಿಂದ 30 ಶ್ವಾನಗಳಿಗೆ ಎಬಿಸಿ ಹಾಗೂ ರೇಬಿಸ್ ಲಸಿಕೆ ಕಾರ್ಯಕ್ರಮ ನಡೆಸುತ್ತಿರುವುದನ್ನು ಅವರು ಶ್ಲಾಘಿಸಿದರು. ಮಕ್ಕಳ ಸುರಕ್ಷತೆಯ ದೃಷ್ಟಿಯಿಂದ ಬೀದಿ ನಾಯಿಗಳ ನಿಯಂತ್ರಣ ಹಾಗೂ ರೇಬಿಸ್ ತಡೆಗೆ ಹೆಚ್ಚಿನ ಆದ್ಯತೆ ನೀಡಬೇಕಿದೆ ಎಂದು ಹೇಳಿದರು.

ಕರ್ನಾಟಕ ಪಶುವೈದ್ಯಕೀಯ ಸಂಘದ ಕಲಬುರಗಿ ಘಟಕದ ಅಧ್ಯಕ್ಷ ಡಾ. ಯಲ್ಲಪ್ಪ ಇಂಗಳೆ ಪ್ರಾಸ್ತಾವಿಕವಾಗಿ ಮಾತನಾಡಿ, ಜಿಲ್ಲೆಯಲ್ಲಿ ಶೇ.50ಕ್ಕೂ ಹೆಚ್ಚು ಸಿಬ್ಬಂದಿ ಹುದ್ದೆಗಳು ಖಾಲಿ ಇದ್ದರೂ ಪಶುಪಾಲನಾ ಇಲಾಖೆ ನಿರಂತರವಾಗಿ ಸೇವೆ ಸಲ್ಲಿಸುತ್ತಿದೆ ಎಂದು ತಿಳಿಸಿದರು.

ಕಳೆದ 15 ದಿನಗಳಲ್ಲಿ ಜಿಲ್ಲೆಯ ವಿವಿಧ ಶಾಲಾ-ಕಾಲೇಜುಗಳು ಹಾಗೂ ಚಿತ್ತಾಪುರ, ಚಿಂಚೋಳಿ, ಸೇಡಂ, ಆಳಂದ ಸೇರಿದಂತೆ ತಾಲೂಕು ಕೇಂದ್ರಗಳಲ್ಲಿ 480ಕ್ಕೂ ಹೆಚ್ಚು ರೇಬಿಸ್ ಜಾಗೃತಿ ಕಾರ್ಯಕ್ರಮಗಳು ನಡೆದಿವೆ. 2030ರ ವೇಳೆಗೆ ರೇಬಿಸ್ ಮುಕ್ತ ಸಮಾಜ ನಿರ್ಮಿಸುವ ಗುರಿಯೊಂದಿಗೆ ಆರೋಗ್ಯ ಇಲಾಖೆಯ ಸಹಯೋಗದಲ್ಲಿ ಜಾಗೃತಿ ಅಭಿಯಾನ ಮುಂದುವರಿಸಲಾಗುತ್ತಿದೆ ಎಂದು ಹೇಳಿದರು. ಕಲಬುರಗಿ ಇಎಸ್‌ಐಸಿ ಸಹ ಪ್ರಾಧ್ಯಾಪಕ ಡಾ. ಮಾವತ್ಕರ್ ಮುನ್ನಾಜೀ ವೆಂಕಟೇಶ ಹಾಗೂ ಬೀದರ್ ಕೆವಿಎಎಫ್‌ಎಸ್‌ಯು ಪ್ರಾಧ್ಯಾಪಕ ಮತ್ತು ಮುಖ್ಯಸ್ಥ ಡಾ. ಸಂಜೀವಕುಮಾರ ಟೋಪನ್ ಅವರು ರೇಬಿಸ್ ನಿಯಂತ್ರಣ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಇದಕ್ಕೂ ಮುನ್ನ ನಗರ ಪೊಲೀಸ್ ಆಯುಕ್ತರ ನೇತೃತ್ವದಲ್ಲಿ ಜಗತ್ ವೃತ್ತದಿಂದ ಸರ್ದಾರ್ ವಲ್ಲಭಭಾಯಿ ಪಟೇಲ್ ವೃತ್ತದವರೆಗೆ ರೇಬಿಸ್ ಜಾಗೃತಿ ಮ್ಯಾರಥಾನ್ ಮತ್ತು ಜಾಗೃತಿ ಜಾಥಾ ನಡೆಯಿತು.

ಕಾರ್ಯಕ್ರಮದಲ್ಲಿ ಅಬಕಾರಿ ಇಲಾಖೆಯ ಜಿಲ್ಲಾ ಅಧಿಕಾರಿ ಡಾ. ಸಂಗನಗೌಡ ಹೊಸಳ್ಳಿ, ಡಿಎಚ್‌ಒ ಶರಣಬಸಪ್ಪ ಕ್ಯಾತನಾಳ, ಕಲಬುರಗಿ ಸ್ಪೆಷಾಲಿಟಿ ಆಸ್ಪತ್ರೆಯ ಉಪನಿರ್ದೇಶಕ ಡಾ. ರಾಜು ದೇಶಮುಖ, ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಉಪನಿರ್ದೇಶಕ ಡಾ. ರವೀಂದ್ರ ಬುರೆ ಸೇರಿದಂತೆ ಜಿಲ್ಲೆಯ ಪಶುವೈದ್ಯಾಧಿಕಾರಿಗಳು ಹಾಗೂ ನಿವೃತ್ತ ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಅಂಬಿಗರ ಚೌಡಯ್ಯ ಗದ್ದುಗೆ ಅಭಿವೃದ್ಧಿಗೆ ವಿಶೇಷ ಪ್ರಾಧಿಕಾರ ರಚಿಸುವಂತೆ ಆಗ್ರಹ



ಕಲಬುರಗಿ,ಸೆ.29-

ಹಾವೇರಿ ಜಿಲ್ಲೆಯ ರಾಣೆಬೆನ್ನೂರು ತಾಲೂಕಿನ ಚೌಡದಾನಪುರದಲ್ಲಿರುವ ಶ್ರೀ ನಿಜಶರಣ ಅಂಬಿಗರ ಚೌಡಯ್ಯ ಅವರ ಮೂಲ ಗದ್ದುಗೆಗೆ ಸಮಗ್ರ ಅಭಿವೃದ್ಧಿ ಕಲ್ಪಿಸಿ, ಅದರ ಸಂರಕ್ಷಣೆ ಮತ್ತು ವಚನ ಪರಂಪರೆಯ ಉಳಿವಿಗಾಗಿ ವಿಶೇಷ ಅಭಿವೃದ್ಧಿ ಪ್ರಾಧಿಕಾರ ರಚಿಸಬೇಕು ಎಂದು ಶ್ರೀ ಅಂಬಿಗರ ಸೇವಾದಳ ಆಗ್ರಹಿಸಿದೆ.

ಈ ಕುರಿತು ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದ ಸೇವಾದಳದ ಪದಾಧಿಕಾರಿಗಳು, ಸರ್ಕಾರಕ್ಕೆ ಮನವಿ ಸಲ್ಲಿಸಿ ಅಂಬಿಗರ ಚೌಡಯ್ಯ ಅವರ ಇತಿಹಾಸ, ವಚನ ಸಾಹಿತ್ಯ, ಸಾಮಾಜಿಕ ಸಂದೇಶ ಹಾಗೂ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ನಿಟ್ಟಿನಲ್ಲಿ ಕಾನೂನುಬದ್ಧ ಸ್ಥಾನಮಾನ ಹೊಂದಿದ ಪ್ರತ್ಯೇಕ ಪ್ರಾಧಿಕಾರ ರಚಿಸಬೇಕೆಂದು ಒತ್ತಾಯಿಸಿದರು.

ಅಂಬಿಗರ ಚೌಡಯ್ಯ ಅವರು 12ನೇ ಶತಮಾನದ ಶಿವಶರಣ ಹಾಗೂ ವಚನಕಾರರಾಗಿದ್ದು, ಬಸವಣ್ಣನವರ ಅನುಭವ ಮಂಟಪದ ಪ್ರಮುಖ ಶರಣರಲ್ಲಿ ಒಬ್ಬರಾಗಿದ್ದಾರೆ. ಅವರ ವಚನಗಳು ಸಾಮಾಜಿಕ ಅಸಮಾನತೆ, ಮೂಢನಂಬಿಕೆ ನಿರ್ಮೂಲನೆ ಹಾಗೂ ಮಾನವೀಯ ಮೌಲ್ಯಗಳ ಸಂದೇಶ ಸಾರಿವೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ.

ಗದ್ದುಗೆ ಆವರಣದಲ್ಲಿ ರಸ್ತೆ, ಕುಡಿಯುವ ನೀರು, ಶೌಚಾಲಯ, ವಿದ್ಯುತ್, ವಾಹನ ನಿಲುಗಡೆ ಸೇರಿದಂತೆ ಭಕ್ತರು ಮತ್ತು ಪ್ರವಾಸಿಗರಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು. ಜೊತೆಗೆ ಅಂಬಿಗರ ಚೌಡಯ್ಯ ಅವರ ಜೀವನ, ವಚನಗಳು ಮತ್ತು ಸಾಮಾಜಿಕ ಚಿಂತನೆಗಳನ್ನು ಪರಿಚಯಿಸುವ ಸಂಗ್ರಹಾಲಯ ಹಾಗೂ ಮಾಹಿತಿ ಕೇಂದ್ರ ಸ್ಥಾಪಿಸಬೇಕು ಎಂದು ಆಗ್ರಹಿಸಲಾಗಿದೆ.

ಕೂಡಲಸಂಗಮ ಮಾದರಿಯಲ್ಲಿ ಗದ್ದುಗೆ ಅಭಿವೃದ್ಧಿಪಡಿಸಿ, ಸಮಗ್ರ ಸಮೀಕ್ಷೆಯ ಬಳಿಕ ಮಾಸ್ಟರ್ ಪ್ಲಾನ್ ಮತ್ತು ಡಿಪಿಆರ್ ಸಿದ್ಧಪಡಿಸಿ ಹಂತ ಹಂತವಾಗಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಬೇಕು. ಕ್ಯೂಆರ್ ಕೋಡ್ ಆಧಾರಿತ ಮಾಹಿತಿ ವ್ಯವಸ್ಥೆ, ಡಿಜಿಟಲ್ ಮ್ಯೂಸಿಯಂ ಹಾಗೂ ಕನ್ನಡ ಸೇರಿದಂತೆ ವಿವಿಧ ಭಾಷೆಗಳಲ್ಲಿ ಮಾಹಿತಿ ಒದಗಿಸುವ ವ್ಯವಸ್ಥೆ ರೂಪಿಸಬೇಕು ಎಂದು ಸೇವಾದಳ ಮನವಿ ಮಾಡಿದೆ.

ಈ ಸಂದರ್ಭದಲ್ಲಿ ಸೇವಾದಳದ ಜಿಲ್ಲಾ ಅಧ್ಯಕ್ಷ ಆನಂದ ಕದ್ದರಗಿ, ವಿವಿಧ ಮಠಾಧೀಶರು, ಶರಣಪ್ಪ ತಳವಾರ್ ಸೇರಿದಂತೆ ಹಲವರಿದ್ದರು.



# ಎಚ್‌ಐವಿ/ಏಡ್ಸ್ ಜಾಗೃತಿಗಾಗಿ ಕಲಬುರಗಿಯಲ್ಲಿ ಬೈಕ್ ಜಾಥಾ

ಕಲಬುರಗಿ,ಸೆ.29-

ಎಚ್‌ಐವಿ/ಏಡ್ಸ್ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ತಡೆಗಟ್ಟುವ ಘಟಕ ವತಿಯಿಂದ ಸೋಮವಾರ ಬೈಕ್ ಜಾಥಾ ಆಯೋಜಿಸಲಾಯಿತು.

ಜಿಲ್ಲಾ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆಯ ವಿಭಾಗೀಯ ಸಹ ನಿರ್ದೇಶಕ ಡಾ. ಶಂಕ್ರಪ್ಪ ಮೈಲಾರಿ ಅವರು ಬೈಕ್ ಜಾಥಾಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಉಪನಿರ್ದೇಶಕ ಡಾ. ಶರಣಬಸಪ್ಪ ಗಣಜಲಖೇಡ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ, ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿ ಡಾ. ಸಂತೋಷ ಅಲಗೂರು, ಜಿಲ್ಲಾ ಶಸ್ತ್ರಜ್ಞೆ ಡಾ. ಅಸ್ಮಾ ಬೇಗ್ ಹಾಗೂ ಜಿಲ್ಲಾ ಅಧಿಕಾರಿ ಡಾ. ಮಹಮ್ಮದ್ ಗಫಾರ್ ಉಪಸ್ಥಿತರಿದ್ದರು.

ಬೈಕ್ ಜಾಥಾವು ಅನ್ನಪೂರ್ಣ ಕ್ರಾಸ್ ಮಾರ್ಗವಾಗಿ ಜಿಲ್ಲಾಧಿಕಾರಿ ಕಚೇರಿಗೆ ತೆರಳಿ, ಬಳಿಕ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಗೆ ಮರಳುವ ಮೂಲಕ ಮುಕ್ತಾಯವಾಯಿತು. ಜಾಥಾದ ಮೂಲಕ ಎಚ್‌ಐವಿ/ಏಡ್ಸ್ ತಡೆಗಟ್ಟುವಿಕೆ, ಮುನ್ನೆಚ್ಚರಿಕೆ ಹಾಗೂ ಜಾಗೃತಿಯ ಕುರಿತು ಸಾರ್ವಜನಿಕರಿಗೆ ಸಂದೇಶ ನೀಡಲಾಯಿತು. ಕಾರ್ಯಕ್ರಮದಲ್ಲಿ ಡಾ. ರಿಮಾ, ಮೇಲ್ವಿಚಾರಕರಾದ ಬಿರಾದಾರ ಮತ್ತು ಅರ್ಚನಾ, ಮೇಲ್ವಿಚಾರಕರು, ಸಿಬ್ಬಂದಿ, ಆರೋಗ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ, ವಿವಿಧ ಸಂಘ-ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

# ಅರ್ಹ ಮಹಿಳೆಯರು ಗೃಹಲಕ್ಷ್ಮಿ ಯೋಜನೆಯ ಸೌಲಭ್ಯದಿಂದ ವಂಚಿತರಾಗಬಾರದು : ಜಿಲ್ಲಾಧಿಕಾರಿ ಇಕ್ರಮ್ ಶರೀಫ್



ಕಲಬುರಗಿ,ಸೆ.29-

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ಗೃಹಲಕ್ಷ್ಮಿ ಯೋಜನೆಯ ಸೌಲಭ್ಯ ಜಿಲ್ಲೆಯ ಪ್ರತಿಯೊಬ್ಬ ನೈಜ ಹಾಗೂ ಅರ್ಹ ಫಲಾನುಭವಿಗೆ ತಲುಪಬೇಕು. ತಾಂತ್ರಿಕ ಕಾರಣ, ಆಧಾರ್ ಲಿಂಕ್ ಸಮಸ್ಯೆ ಅಥವಾ ದಾಖಲೆಗಳ ಸಣ್ಣಪುಟ್ಟ ಲೋಪಗಳಿಂದ ಯಾವುದೇ ಅರ್ಹ ಮಹಿಳೆ ಯೋಜನೆಯ ಸೌಲಭ್ಯದಿಂದ ವಂಚಿತರಾಗಬಾರದು ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಆಯೋಜಿಸಿದ್ದ ಗೃಹಲಕ್ಷ್ಮಿ ಯೋಜನೆಯ ಅರ್ಜಿ ಮರುಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯೋಜನೆಯ ನಿಯಮಗಳನ್ನು ಉಲ್ಲಂಘಿಸಿ ಸೌಲಭ್ಯ ಪಡೆಯುತ್ತಿರುವ ಅನರ್ಹರನ್ನು ಗುರುತಿಸಿ ತಡೆಯುವ ಜತೆಗೆ, ಅರ್ಹ ಫಲಾನುಭವಿಗಳಿಗೆ ಯಾವುದೇ ತೊಂದರೆಯಾಗದಂತೆ ಪಾರದರ್ಶಕವಾಗಿ ಅರ್ಜಿಗಳ ಮರುಪರಿಶೀಲನೆ ನಡೆಸಬೇಕು. ಅಧಿಕಾರಿಗಳು ಮನೆ ಮನೆಗೆ ತೆರಳಿ ಫಲಾನುಭವಿಗಳ ನೈಜತೆಯನ್ನು ಪರಿಶೀಲಿಸಿ ಜವಾಬ್ದಾರಿಯಿಂದ ಕಾರ್ಯ ಪೂರ್ಣಗೊಳಿಸಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಪಂಚಾಯಿತಿ ಅಧಿಕಾರಿಗಳೊಂದಿಗೆ ಗೃಹಲಕ್ಷ್ಮಿ ಯೋಜನೆಯ ಪ್ರಸ್ತುತ ಸ್ಥಿತಿಗತಿ ಕುರಿತು ಜಿಲ್ಲಾಧಿಕಾರಿಗಳು ವಿಸ್ತೃತವಾಗಿ ಚರ್ಚಿಸಿದರು.

ಜಿಲ್ಲೆಯಲ್ಲಿ ಪ್ರಸ್ತುತ ಸುಮಾರು 5.97 ಲಕ್ಷ ಫಲಾನುಭವಿಗಳು ಗೃಹಲಕ್ಷ್ಮಿ ಯೋಜನೆಯಡಿ ನೋಂದಾಯಿಸಿಕೊಂಡಿದ್ದು, ಕಳೆದ 36 ತಿಂಗಳ ಅವಧಿಯಲ್ಲಿ ಪ್ರತಿ ತಿಂಗಳು ಸರಾಸರಿ 120 ಕೋಟಿ ರೂ. ಸೇರಿದಂತೆ ಒಟ್ಟು 4,000 ಕೋಟಿ ರೂ. ಗೂ ಅಧಿಕ ಮೊತ್ತ ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಜಮೆಯಾಗಿದೆ ಎಂದು ಸಭೆಯಲ್ಲಿ ಮಾಹಿತಿ ನೀಡಲಾಯಿತು.

ಜಿಲ್ಲೆಯ 3,237 ಅಂಗನವಾಡಿ ಕೇಂದ್ರಗಳ 1,898 ಅಂಗನವಾಡಿ ಕಾರ್ಯಕರ್ತೆಯರು ಯೋಜನೆಯ ಅನುಷ್ಠಾನ ಹಾಗೂ ಮರುಪರಿಶೀಲನಾ ಕಾರ್ಯದಲ್ಲಿ ಭಾಗವಹಿಸಲಿದ್ದಾರೆ. ಅಂಗನವಾಡಿ ಕಾರ್ಯಕರ್ತೆ ಯರು, ಆಶಾ ಕಾರ್ಯಕರ್ತೆಯರು ಹಾಗೂ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಒಳಗೊಂಡ ಜಂಟಿ ತಂಡಗಳು ನಗರ ಮತ್ತು ಗ್ರಾಮೀಣ ಪ್ರದೇಶಗಳ ಪ್ರತಿಯೊಂದು ಮನೆಗೆ ತೆರಳಿ ಫಲಾನುಭವಿಗಳ ನೈಜತೆಯನ್ನು ಪರಿಶೀಲಿಸಲಿವೆ.

ಮರಣ ಹೊಂದಿರುವ ಫಲಾನುಭವಿಗಳ ಪ್ರಕರಣಗಳಲ್ಲಿಯೂ ಕುಟುಂಬದ ಪರಿಸ್ಥಿತಿಯನ್ನು ನಿಯಮಾನುಸಾರ ಪರಿಶೀಲಿಸಲಾಗುವುದು. ಕುಟುಂಬಕ್ಕೆ ಬೇರೆ ಯಾವುದೇ ಜೀವನೋಪಾಯದ ಆದಾಯವಿಲ್ಲದಿದ್ದರೆ ಅರ್ಹ ಮಹಿಳೆಯರಿಗೆ ಯೋಜನೆಯ ಸೌಲಭ್ಯ ಮುಂದುವರಿಸುವ ಕುರಿತು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಯಲ್ಲಿ ನಿರ್ಧರಿಸಲಾಯಿತು.

ಫಲಾನುಭವಿಗಳ ದಾಖಲೆಗಳನ್ನು ಸ್ಥಳದಲ್ಲೇ ಪರಿಶೀಲಿಸಲು ಆಧಾರ್ ಆಧಾರಿತ ಫೇಸ್ ರೆಕಗ್ನಿಷನ್ ಹಾಗೂ ಜಿಪಿಎಸ್ ಮ್ಯಾಪಿಂಗ್ ತಂತ್ರಜ್ಞಾನ ಹೊಂದಿರುವ ಮೊಬೈಲ್ ಆ್ಯಪ್ ಬಳಕೆಗೆ ತರಲಾಗುತ್ತಿದ್ದು, ಈ ಆ್ಯಪ್ ಕೆಲವೇ ದಿನಗಳಲ್ಲಿ ಕಾರ್ಯಾರಂಭಗೊಳ್ಳಲಿದೆ ಎಂದು ಅಧಿಕಾರಿಗಳು ಸಭೆಗೆ ತಿಳಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಎಲ್ಲ ಅಧಿಕಾರಿಗಳು ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ, ನಿಗದಿತ ಕಾಲಮಿತಿಯೊಳಗೆ ಅರ್ಜಿಗಳ ಮರುಪರಿಶೀಲನೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಆದೇಶಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಎಸ್. ಸಂಕನೂರ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಜಿಲ್ಲಾ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕರು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಎಸ್‌ಐಆರ್ ಪ್ರಕ್ರಿಯೆ ವಿರೋಧಿಸಿ ಬೀದರ್‌ನಲ್ಲಿ ಕಾಂಗ್ರೆಸ್‌ನಿಂದ ಬೃಹತ್ ಪ್ರತಿಭಟನೆ




ಬೀದರ್,ಸೆ.29-

ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ (ಎಸ್‌ಐಆ)ರ್ ಪ್ರಕ್ರಿಯೆಯನ್ನು ವಿರೋಧಿಸಿ ಹಾಗೂ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸುವಂತೆ ಆಗ್ರಹಿಸಿ ಜಿಲ್ಲಾ ಕಾಂಗ್ರೆಸ್ ವತಿಯಿಂದ ಸೋಮವಾರ ಬೀದರ್ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಯಿತು.

ನಗರದ ಅಂಬೇಡ್ಕರ್ ವೃತ್ತದಲ್ಲಿ ನಡೆದ ಪ್ರತಿಭಟನೆಯಲ್ಲಿ ಕಾಂಗ್ರೆಸ್ ಪಕ್ಷ ಹಾಗೂ ಎನ್‌ಎಸ್‌ಯುಐ ಸಂಘಟನೆಯ ನಾಯಕರು, ಮುಖಂಡರು ಮತ್ತು ಕಾರ್ಯ ಕರ್ತರು ಭಾಗವಹಿಸಿ ಕೇಂದ್ರ ಸರ್ಕಾರ ಹಾಗೂ ಚುನಾವಣಾ ಆಯೋಗದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಬ್ದುಲ್ ಮನ್ನಾನ್ ಸೇಠ್, ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದ ಆರೋಪಗಳು ಬಹಿರಂಗವಾಗಿರುವ ಹಿನ್ನೆಲೆಯಲ್ಲಿ ದೇಶಾದ್ಯಂತ ವಿರೋಧ ವ್ಯಕ್ತವಾಗುತ್ತಿದೆ ಎಂದು ಕಾಂಗ್ರೆಸ್ ಪಕ್ಷದ ಪರವಾಗಿ ಆರೋಪಿಸಿದರು. ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ವಿರೋಧ ಪಕ್ಷಗಳು ಪ್ರಶ್ನೆಗಳನ್ನು ಎತ್ತುತ್ತಿವೆ ಎಂದು ಹೇಳಿದರು.

ಚ ' ು ನ ಾ ವ ' ಣ ಾ ಆಯೋಗದಲ್ಲಿರುವ ಇಬ್ಬರು ಆಯುಕ್ತರು ಕಳೆದ ಹತ್ತು ತಿಂಗಳಲ್ಲಿ ಎಸ್‌ಐಆರ್‌ಗೆ ಸಂಬಂಧಿಸಿದ ಕೆಲವು ನಿರ್ಧಾರಗಳ ಬಗ್ಗೆ ಮುಖ್ಯ ಚುನಾವಣಾ ಆಯುಕ್ತರಿಗೆ ಹಲವು ಬಾರಿ ಆಕ್ಷೇಪ ವ್ಯಕ್ತಪಡಿಸಿದ್ದಾರೆ ಎಂಬ ವರದಿಗಳನ್ನು ಉಲ್ಲೇಖಿಸಿದ ಅವರು, ಈ ವಿಚಾರದ ಕುರಿತು ಸಮಗ್ರ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಪ್ರಜಾಪ್ರಭುತ್ವವನ್ನು ಬಲಪಡಿಸಲು ಚುನಾವಣಾ ಪ್ರಕ್ರಿಯೆ ಪಾರದರ್ಶಕವಾಗಿರಬೇಕು. ಎಸ್‌ಐಆರ್ ಪ್ರಕ್ರಿಯೆಗೆ ಸಂಬಂಧಿಸಿದ ಆರೋಪಗಳ ಕುರಿತು ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಮಾಜಿ ವಿಧಾನ ಪರಿಷತ್ ಸದಸ್ಯ ಅರವಿಂದಕುಮಾರ್ ಅರಳಿ ಮಾತನಾಡಿ, ಎಸ್‌ಐಆರ್ ಪ್ರಕ್ರಿಯೆಯನ್ನು ರದ್ದುಗೊಳಿಸಿ ಈ ಹಿಂದಿನ ಮತದಾರರ ಪಟ್ಟಿಯನ್ನೇ ಮುಂದುವರಿಸಬೇಕು ಎಂದು ಕಾಂಗ್ರೆಸ್ ಪಕ್ಷದ ಪರವಾಗಿ ಒತ್ತಾಯಿಸಿದರು. ಎಸ್‌ಐಆರ್ ಪ್ರಕ್ರಿಯೆಯ ಕುರಿತು ಸ್ವತಂತ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದರು.

# ಕಾಳಗಿ ತಾಲೂಕು ಪದವೀಧರ ಶಿಕ್ಷಕರ ಸಂಘದ ಅಧ್ಯಕ್ಷರಾಗಿ ದೇವೇಂದ್ರ ಓಕಳಿ ಅವಿರೋಧ ಆಯ್ಕೆ



ಕಾಳಗಿ,ಸೆ.29-

ತಾಲೂಕಿನ ಕರ್ನಾಟಕ ರಾಜ್ಯ ಪದವೀಧರ ಶಾಲಾ ಶಿಕ್ಷಕರ ಸಂಘದ 202631ನೇ ಸಾಲಿನ ಅವಧಿಯ ಅಧ್ಯಕ್ಷರಾಗಿ ದೇವೇಂದ್ರ ಓಕಳಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಮಹೇಶ ಬಡಿಗೇರ ತಿಳಿಸಿದ್ದಾರೆ.

ಈ ಮೊದಲು ಸಂಘದ 12 ನಿರ್ದೇಶಕ ಸ್ಥಾನಗಳಿಗೆ ನಡೆದ ಚುನಾವಣೆಗೆ ಸೆ.22ರಂದು 15 ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದರು. ಬಳಿಕ ಮೂವರು ಅಭ್ಯರ್ಥಿಗಳು ನಾಮಪತ್ರ ಹಿಂಪಡೆದ ಹಿನ್ನೆಲೆಯಲ್ಲಿ 12 ಸ್ಥಾನಗಳಿಗೆ12 ಅಭ್ಯರ್ಥಿಗಳು ಮಾತ್ರ ಅಂತಿಮ ಕಣದಲ್ಲಿ ಉಳಿದಿದ್ದರು.

ಸೋಮವಾರ ನಡೆದ ಚುನಾವಣಾ ಪ್ರಕ್ರಿಯೆಯಲ್ಲಿ ದೇವೇಂದ್ರ ಓಕಳಿ, ನಾಗರಾಜ ಮಡಿವಾಳ, ಪ್ರಕಾಶ ರೊಳೆ, ನಾಗಪ್ಪ ಭೀಮಗೋಳ, ಮಲ್ಲಿಕಾರ್ಜುನ ಅಷ್ಟಗಿ, ಸಿದ್ಧಾರೂಢ, ಸಿದ್ದರಾಮಪ್ಪ ದಳಪತಿ, ಮಹಿಬೂಬ್ ಸಾಬ್, ಆರತಿ, ಪೂಜಾ ಸಿಂಗೆ, ಜ್ಯೋತಿ ಪವಾರ್ ಹಾಗೂ ಭೀಮರಾಯ ಅವರು ನಿರ್ದೇಶಕರಾಗಿ ಅವಿರೋಧವಾಗಿ ಆಯ್ಕೆಯಾದರು ಎಂದು ಚುನಾವಣಾಧಿಕಾರಿ ಘೋಷಿಸಿದರು.

ಬಳಿಕ ನಡೆದ ಪದಾಧಿಕಾರಿಗಳ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ದೇವೇಂದ್ರ ಓಕಳಿ, ಪ್ರಧಾನ ಕಾರ್ಯದರ್ಶಿ ಸ್ಥಾನಕ್ಕೆ ಪ್ರಕಾಶ ರೊಳೆ ಹಾಗೂ ಖಜಾಂಚಿ ಸ್ಥಾನಕ್ಕೆ ನಾಗಪ್ಪ ಭೀಮಗೋಳ ಮಾತ್ರ ನಾಮಪತ್ರ ಸಲ್ಲಿಸಿದ್ದರಿಂದ ಮೂವರೂ ಅವಿರೋಧವಾಗಿ ಆಯ್ಕೆಯಾದರು.

ಚುನಾವಣೆಯಲ್ಲಿ ಎಲ್ಲಾ ಪದಾಧಿಕಾರಿಗಳು ಅವಿರೋಧವಾಗಿ ಆಯ್ಕೆಯಾದ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾಗೂ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವತಿಯಿಂದ ನೂತನ ಪದಾಧಿಕಾರಿಗಳನ್ನು ಸನ್ಮಾನಿಸಿ, ಸಿಹಿ ಹಂಚುವ ಮೂಲಕ ವಿಜಯೋತ್ಸವ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ಸಂತೋಷ ಕಲಮೂಡ, ಸರ್ಕಾರಿ ನೌಕರರ ಸಂಘದ ತಾಲೂಕಾಧ್ಯಕ್ಷ ಅನೀಲಕುಮಾರ ಗುತ್ತೇದಾರ, ಪ್ರಧಾನ ಕಾರ್ಯದರ್ಶಿ ಬಸವಂತರಾಯ ಪೆದ್ದಿ, ಯೂಸೂಫಖಾನ್, ವಿಷ್ಣುಕಾಂತ ಮೈಲಾರಿ, ವಿವೇಕಾನಂದ, ಶಂಕರ ಮಂಗಲಗಿ, ಸಂಜುಕುಮಾರ ಕೋಡ್ಲಿ, ಮಾಣಿಕರಾವ, ಶಂಕರ ಬಿರೆದಾರ, ಮಾರುತಿ ಗಿರಣಿ ಸೇರಿದಂತೆ ಅನೇಕರು ಇದ್ದರು.

## ಒಂದನೇಯ ಪುಟದಿಂದ

### ನಾಡ ಹಬ್ಬ ದಸರಾ ಪೂರ್ವಭಾವಿ ಸಭೆ

# ಅರ್ಥಪೂರ್ಣವಾಗಿ ದಸರಾ ಆಚರಣೆಗೆ ಅಗತ್ಯ ಕ್ರಮಕ್ಕೆ ಆಯುಕ್ತ ಜುಬಿನ್ ಸೂಚನೆ

ಪಾಲಿಕೆಯ ಸಿಬ್ಬಂದಿ ವರ್ಗದವರು, ಶಾಲೆಯ ಶಿಕ್ಷಕರು, ಶಾಲೆಯ ಮಕ್ಕಳು ಈ ಮೆರವಣಿಗೆಯಲ್ಲಿ ಭಾಗವಹಿಸಬೇಕು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸ್ಥಳೀಯ ಕಲಾತಂಡಗಳಿದ ಕನಿಷ್ಠ 15 ಕಲಾ ತಂಡವನ್ನು ಆಹ್ವಾನಿಸಿ ಮೆರವಣಿಗೆಯಲ್ಲಿ ಪ್ರದರ್ಶನ ನೀಡಬೇಕು. ನಗರದ ಪ್ರಮುಖ ವೃತ್ತಗಳಲ್ಲಿ ದೀಪ ಅಲಂಕಾರ ಮತ್ತು ವಿವಿಧ ಅಲಂಕಾರ ಮಾಡಬೇಕು. ಸದರಿ ಮೆರವಣಿಗೆಯಲ್ಲಿ ರಥ ಮತ್ತು ರಥಕ್ಕೆ ಅಲಂಕಾರ ವ್ಯವಸ್ಥೆ ಮಾಡಿ, ಸ್ವ-ಸಹಾಯ ಗುಂಪುಗಳಿದ 200 ಮಹಿಳೆಯರ 2 ತಂಡಗಳು ಕುಂಭಮೇಳ ಜರುಗಿಸಲು ಅಗತ್ಯ ಕ್ರಮ ವಹಿಸಬೇಕೆಂದು ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಆಡಳಿತ ವಿಭಾಗದ ಉಪ ಆಯುಕ್ತರಾದ ಶರಣಪ್ಪ, ಮುರಾಳಿಧರ್, ಪಾಲಿಕೆಯ ಅಭಿವೃದ್ಧಿ ವಿಭಾಗದ ಉಪ ಆಯುಕ್ತ ಭರತ್ ಸೇರಿದಂತೆ ಮುಖಂಡರಾದ ಕೆ.ಶಾಂತಪ್ಪ, ಜಯಣ್ಣ, ಕನ್ನಡ ಪರ ಸಂಘಟನೆಯ ಮುಖಂಡರಾದ ಶರಣಪ್ಪ, ಶಿವುಕುಮಾರ್, ವಾಣಿಜ್ಯೋದಮ ಸಂಘದ ಅಧ್ಯಕ್ಷರಾದ ಕಮಲ್ ಕಿಶೋರ್, ಕಲ್ಯಾಣ ಸಮಿತಿಯ ಜಯಂತ್ ರಾವ್ ಪತ್ತಂಗೆ, ಶಿಲ್ಪ ಮೆಡಿಕಲ್ ಲಕ್ಷ್ಮಿಕಾಂತ್, ಸಾಹಿತ್ಯಿಗಳಾದ ವೆಂಕಟೇಶ ಬೆವಿನಂಚಿ, ಆಂಜಿನೇಯ, ಈರಣ್ಣ ಸೇರಿದಂತೆ ಇತರರು ಇದ್ದರು.

ಕೃಷ್ಣ ಕಟ್ಟಿಮನಿ ಅವರು ಕಾರ್ಯಕ್ರಮವನ್ನು ನಿರೂಪಿಸಿದರು.

# ಮುಖ್ಯ ಚುನಾವಣಾ ಆಯುಕ್ತರನ್ನು ವಜಾಗೊಳಿಸಲು ಆಗ್ರಹಿಸಿ ಎಡಪಕ್ಷಗಳಿಂದ ಪ್ರತಿಭಟನೆ

ಮೂವರು ಚುನಾವಣಾ ಆಯುಕ್ತರಲ್ಲಿ ಇಬ್ಬರು ಮತದಾರರ ನೋಂದಣಿ, ಹೆಸರುಗಳನ್ನು ತೆಗೆದುಹಾಕುವುದು, ಮರು ಸೇರ್ಪಡೆ ಹಾಗೂ ಎಸ್‌ಐರ್ಆ ಪ್ರಕ್ರಿಯೆಗೆ ಸಂಬಂಧಿಸಿದ ಹಲವು ನಿರ್ಧಾರಗಳ ಕುರಿತು ಆಕ್ಷೇಪ ವ್ಯಕ್ತಪಡಿಸಿದ್ದಾರೆ ಎಂದು ಅವರು ಆರೋಪಿಸಿದರು. ಈ ಬೆಳವಣಿಗೆಗಳು ಚುನಾವಣಾ ಆಯೋಗದ ಕಾರ್ಯನಿರ್ವಹಣೆಯ ಪಾರದರ್ಶಕತೆ ಮತ್ತು ಸ್ವಾಯತ್ತತೆಯ ಬಗ್ಗೆ ಅನುಮಾನಗಳಿಗೆ ಕಾರಣವಾಗಿವೆ ಎಂದು ಹೇಳಿದರು.

ಮತದಾರರ ದತ್ತಾಂಶ ನಿರ್ವಹಣೆಯಲ್ಲಿ ಕೇಂದ್ರೀಕರಣ ಹೆಚ್ಚಾಗಿದೆ ಹಾಗೂ ರಾಜ್ಯ ಮತ್ತು ಕ್ಷೇತ್ರ ಮಟ್ಟದ ಅಧಿಕಾರಿಗಳ ಪ್ರವೇಶಕ್ಕೆ ನಿರ್ಬಂಧ ಹೇರಲಾಗಿದೆ ಎಂಬ ಆರೋಪಗಳ ಕುರಿತು ಸ್ವತಂತ್ರ ತನಿಖೆ ನಡೆಸಬೇಕು ಎಂದು ಅವರು ಒತ್ತಾಯಿಸಿದರು.

ಎಸ್‌ಐರ್ಆ ಪ್ರಕ್ರಿಯೆ ಮತದಾರರ ಪಟ್ಟಿಯ ಪರಿಷ್ಕರಣೆಗೆ ಮಾತ್ರ ಸೀಮಿತವಾದ ವಿಷಯವಲ್ಲ. ಇದು ಚುನಾವಣಾ ಆಯೋಗದ ಪಾರದರ್ಶಕತೆ, ಪ್ರಜಾಸತ್ತಾತ್ಮಕ ಕಾರ್ಯನಿರ್ವಹಣೆ ಹಾಗೂ ಸಾರ್ವತ್ರಿಕ ಮತದಾನದ ಹಕ್ಕಿನ ರಕ್ಷಣೆಗೆ ಸಂಬಂಧಿಸಿದ ಮಹತ್ವದ ವಿಷಯವಾಗಿದೆ ಎಂದು ಪ್ರತಿಭಟನಾಕಾರರು ಅಭಿಪ್ರಾಯಪಟ್ಟರು.

ಪ್ರತಿಭಟನಾಕಾರರು ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ತೆರವುಗೊಳಿಸಬೇಕು, ಎಸ್‌ಐರ್ಆ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಬೇಕು, ಮತದಾರರ ಪಟ್ಟಿಯಿಂದ ತಪ್ಪಾಗಿ ಹೊರಗಿಡಲಾಗಿದೆ ಎನ್ನಲಾದವರ ಹೆಸರುಗಳನ್ನು ಮರುಸ್ಥಾಪಿಸಬೇಕು ಹಾಗೂ ಚುನಾವಣಾ ಆಯೋಗದ ಸ್ವತಂತ್ರ ಮತ್ತು ಪಾರದರ್ಶಕ ಕಾರ್ಯನಿರ್ವಹಣೆಯನ್ನು ಖಚಿತಪಡಿಸಬೇಕು ಎಂದು ಆಗ್ರಹಿಸಿದರು.

ಅಲ್ಲದೆ, ಚುನಾವಣಾ ಆಯುಕ್ತರ ನೇಮಕಾತಿ ವ್ಯವಸ್ಥೆಯಲ್ಲಿ ಸುಧಾರಣೆ ತಂದು, ಪ್ರಧಾನಮಂತ್ರಿ, ಲೋಕಸಭೆಯ ವಿರೋಧ ಪಕ್ಷದ ನಾಯಕ ಹಾಗೂ ಭಾರತದ ಮುಖ್ಯ ನ್ಯಾಯಮೂರ್ತಿಯನ್ನು ಒಳಗೊಂಡ ಆಯ್ಕೆ ಸಮಿತಿಯ ಮೂಲಕ ನೇಮಕಾತಿ ಮಾಡುವ ವ್ಯವಸ್ಥೆ ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಿಪಿಐ(ಎಂ) ಜಿಲ್ಲಾ ಕಾರ್ಯದರ್ಶಿ ಕೆ.ಜಿ. ವಿರೇಶ್, ಸಿಪಿಐ ಜಿಲ್ಲಾ ಕಾರ್ಯದರ್ಶಿ ಚಂದ್ರಶೇಖರ್ ಕ್ಯಾತ್ನಟಿ, ಸಿಪಿಐ(ಎಂ-ಎಲ್) ಲಿಬರೇಷನ್ ಮುಖಂಡ ಅಜೀಜ್ ಜಗೀರ್‌ದಾರ್, ಎಸ್‌ಯುಸಿಐ ಜಿಲ್ಲಾ ಕಾರ್ಯದರ್ಶಿ ಚಂದ್ರಗಿರೀಶ ಸೇರಿದಂತೆ ವಿವಿಧ ಎಡಪಕ್ಷಗಳ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಪ್ರವಾಸಿ ತಾಣಗಳ ಸಂರಕ್ಷಣೆ ನಮ್ಮೆಲ್ಲರ ಆದ್ಯ ಕರ್ತವ್ಯ: ಡಿಸಿ ಪೂವಿತಾ ಎಸ್

ಉತ್ತೇಜಿಸಲಾಗುತ್ತಿದೆ ಎಂದರು.

ಈ ವೇಳೆ ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕ ನಜೀರ್ ಅಹ್ಮದ್ ಕನವಳ್ಳಿ ಮಾತನಾಡಿ, ರಾಯಚೂರು ನಗರದಲ್ಲೇ ಇರುವ ಪಾಂಚೆ ಬಿಬಿ ಕುರಿತು ಅನೇಕರಿಗೆ ಸರಿಯಾದ ಮಾಹಿತಿ ಇಲ್ಲ. ಈ ಹಿನ್ನೆಲೆಯಲ್ಲಿ 100 ವಿದ್ಯಾರ್ಥಿಗಳಿಗೆ ಟ್ರೆಕ್ಕಿಂಗ್ ವ್ಯವಸ್ಥೆ ಮಾಡಲಾಗಿದ್ದು, ತಾಣದ ವೈಶಿಷ್ಟಗಳನ್ನು ಅವರಿಗೆ ಪರಿಚಯಿಸಲಾಗುವುದು ಎಂದರು.

ಜಿಲ್ಲೆಯ 38 ಪ್ರವಾಸಿ ತಾಣಗಳ ಸಮಗ್ರ ಮಾಹಿತಿಯನ್ನು ಒಳಗೊಂಡ ಡಿಜಿಟಲ್ ಪಟ್ಟಿಯನ್ನು ಸಿದ್ಧಪಡಿಸಲಾಗಿದೆ. ಜಿಲ್ಲಾ ಕೇಂದ್ರದ ವಿವಿಧ ಪ್ರಮುಖ ಸ್ಥಳಗಳಾದ ಜಿಲ್ಲಾಧಿಕಾರಿ ಕಚೇರಿ, ಬಸ್ ನಿಲ್ದಾಣ, ನ್ಯಾಯಾಲಯ, ಜಿಲ್ಲಾ ಪಂಚಾಯಿತಿ ಸೇರಿದಂತೆ ಇತರ ಸ್ಥಳಗಳಲ್ಲಿ ಕ್ಯೂಆರ್ ಕೋಡ್ ಸ್ಕ್ಯಾನರ್ ಬೋರ್ಡ್‌ಗಳನ್ನು ಅಳವಡಿಸಲಾಗುತ್ತಿದೆ. ಈ ಕ್ಯೂಆರ್ ಕೋಡ್‌ಗಳನ್ನು ಸ್ಕ್ಯಾನ್ ಮಾಡಿದರೆ ಹೈಪರ್‌ಲಿಂಕ್ ಮೂಲಕ ಜಿಲ್ಲೆಯ 38 ಪ್ರವಾಸಿ ತಾಣಗಳ ಸಂಪೂರ್ಣ ವಿವರಗಳನ್ನು ಪಡೆಯಬಹುದಾಗಿದೆ ಎಂದು ತಿಳಿಸಿದರು.

ಪ್ರವಾಸೋದ್ಯಮ ಕ್ಷೇತ್ರವನ್ನು ಅಭಿವೃದ್ಧಿಪಡಿಸಲು ಎಐ ತಂತ್ರಜ್ಞಾನವನ್ನು ಬಳಸಿಕೊಳ್ಳಲಾಗುತ್ತಿದ್ದು, ಇದು ಪ್ರವಾಸಿಗರಿಗೆ ಅನುಕೂಲವಾಗುವಂತೆ ಅವರ ಅಗತ್ಯಕ್ಕೆ ತಕ್ಕ ಕಸ್ಟಮೈಸ್ಡ್ ಇಟಿನರರಿ ಹಾಗೂ ಪ್ರಯಾಣದ ಯೋಜನೆಯನ್ನು ಸಿದ್ಧಪಡಿಸಿಕೊಡಲಿದೆ ಎಂದರು.

ಪ್ರಥಮ ಪಿಯುಸಿ ವಿದ್ಯಾರ್ಥಿಗಳು ತಮ್ಮ ಜೀವನದ ಪರಿವರ್ತನಾ ಹಂತದಲ್ಲಿದ್ದು, ಎಐ ಹಾಗೂ ಚಾಟ್‌ಜಿಪಿಟಿಯಂತಹ ಆಧುನಿಕ ತಂತ್ರಜ್ಞಾನಗಳನ್ನು ಜ್ಞಾನಾರ್ಜನೆಗಾಗಿ ಧನಾತ್ಮಕವಾಗಿ ಬಳಸಿಕೊಳ್ಳುವಂತೆ ಸಲಹೆ ನೀಡಿದರು.

ಈ ವೇಳೆ ಕೆಎಸ್‌ಟಿಡಿಸಿ ವತಿಯಿಂದ ತರಬೇತಿ ಪಡೆದ ಎರಡನೇ ಹಂತದ 20 ಪ್ರವಾಸಿ ಮಿತ್ರರಿಗೆ ಪ್ರಮಾಣಪತ್ರ ವಿತರಿಸಲಾಯಿತು. ಬಳಿಕ ನಗರದ ಪಾಂಚೆ ಬಿಬಿ ಪ್ರದೇಶದಲ್ಲಿ ಟ್ರೆಕ್ಕಿಂಗ್ ನಡೆಸಲಾಯಿತು.

ಇದೇ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಕೃಷ್ಣ ಶಾವಂತಗೇರ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಶರಣಬಸವ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣ್ ಕುಮಾರ್, ಪ್ರವಾಸೋದ್ಯಮ ಇಲಾಖೆಯ ಪ್ರಥಮ ದರ್ಜೆ ಸಹಾಯಕಿ ಕವಿತಾ, ಸಮಾಲೋಚಕರಾದ ಶ್ರೀನಾಥ್, ಆನಂದ, ಆಹಾರ ಇಲಾಖೆಯ ವ್ಯವಸ್ಥಾಪಕ ಜಿ. ಹರೀಶ್, ಆನಂದ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕೃಷಿ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಇಂಜಿನಿಯರ್ಸ್ ದಿನ ಆಚರಣೆ

ಯಾಕೆಂದರೆ ಇದು ದೇಶಕ್ಕೆ ಅನ್ನ ನೀಡುವ ಘನತೆಯ ಜವಾಬ್ದಾರಿಯನ್ನು ಹೊತ್ತುಕೊಂಡಿದೆ. ಆದುದರಿಂದ ಪ್ರತಿಯೊಬ್ಬ ವಿದ್ಯಾರ್ಥಿಯು ಕೃಷಿ ಇಂಜಿನಿಯರಿಗ್ ತಂತ್ರಾಶಗಳನ್ನು ಮೈಗೂಡಿಸಿಕೊಂಡು ವಿದ್ಯಾಭ್ಯಾಸ ಮಾಡಿ ಉತ್ತಮ ಕೃಷಿ ಇಂಜಿನಿಯರ್ ಗಳಾಗಿ ಹೊರಬೇಕೆಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾಲಯ ರಾಯಚೂರಿನ ಆಸ್ತಿ ಅಧಿಕಾರಿಗಳಾದ ರವಿ ಮೇಸಾ, ಕೃಷಿ ತಾಂತ್ರಿಕ ಮಹಾವಿದ್ಯಾಲಯದ ಎಲ್ಲಾ ವಿಭಾಗಗಳ ಮುಖ್ಯಸ್ಥರುಗಳು, ಶಿಕ್ಷಕ, ಶಿಕ್ಷಕಿಯೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಇದ್ದರು.

ವಿದ್ಯಾರ್ಥಿ ನಿರ್ಮಿತ ಅವರು ಕಾರ್ಯಕ್ರಮವನ್ನು ನಿರೂಪಿಸಿದರು. ಆಹಾರ ಮತ್ತು ತಂತ್ರಜ್ಞಾನ ವಿಭಾಗದ ಮುಖ್ಯಸ್ಥರಾದ ಡಾ. ಉದಯ್ ಕುಮಾರ್ ನಿಡೋನಿ ಅವರು ಸ್ವಾಗತಿಸಿದರು. ಪ್ರಾಧ್ಯಾಪಕರಾದ ಡಾ. ಪಿ.ಎಫ್. ಮತದ ಅವರು ವಂದಿಸಿದರು.

# ಸಿಂಧನೂರಿನಲ್ಲಿ ಹಾನಗಲ್ಲ ಶ್ರೀಗಳ ಜಯಂತಿ ಮಹೋತ್ಸವ : ಭಕ್ತಿ ಭಾವದಿಂದ ನಡೆದ ಪಾದಯಾತ್ರೆ

ಸೌಹಾರ್ದತೆಯಿಂದ. ಭಾಗವಹಿಸುವ ಮೂಲಕ ಭಾವೈಕ್ಯತೆಯ ಸಂದೇಶ ಸಾರಿದರು. ಈ ಪಾದಯಾತ್ರೆಯಲ್ಲಿ ಭಕ್ತರು ಸಾರ್ವಜನಿಕರು ಹಾಗೂ ವಿವಿಧ ಸಮಾಜದವರು ಪಾಲ್ಗೊಂಡು ಶ್ರೀಗಳ ಜಯಂತಿ ಮಹೋತ್ಸವಕ್ಕೆ ಮೆರೆಗೂ ತಂದರು. ಸಿಂಧನೂರಿನಲ್ಲಿ ಹಾನಗಲ್ಲ ಶ್ರೀ ಜಯಂತಿ ಮಹೋತ್ಸವ ಪ್ರವಚನ ಕಾರ್ಯಕ್ರಮಗಳು ಭಕ್ತಿ ಭಾವದಿಂದ ಮುಂದುವರೆದಿದ್ದು ಅಕ್ಟೋಬರ್ ತಿಂಗಳ 4ರ ವರೆಗೆ ಕಾರ್ಯಕ್ರಮ ಗಳು ನಡೆಯಲಿವೆ.

**ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ**

# ಸ್ವಾಮಿನಾಥನ್ ಆಯೋಗದ ಶಿಫಾರಸಿನಂತೆ ಎಂಎಸ್‌ಪಿ ಜಾರಿಗೆ ಆಗ್ರಹಿಸಿ ರೈತರಿಂದ ಪ್ರತಿಭಟನೆ

ಬೀದರ್,ಸೆ.29-

ರೈತರು ಬೆಳೆಯುವ ಎಲ್ಲ ಬೆಳೆಗಳಿಗೆ ಡಾ. ಎಂ.ಎಸ್.ಸ್ವಾಮಿನಾಥನ್ ಆಯೋಗದ ಶಿಫಾರಸಿನ ಆಧಾರದ ಮೇಲೆ ಕಾನೂನುಬದ್ಧ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ನಿಗದಿಪಡಿಸಬೇಕು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಸಂಯುಕ್ತ ಕಿಸಾನ್ ಮೋರ್ಚಾ ಹಾಗೂ ಕಾರ್ಮಿಕ ಸಂಘಗಳ ಒಕ್ಕೂಟದ ವತಿಯಿಂದ ಸೋಮವಾರ ಪ್ರತಿಭಟನೆ ನಡೆಸಲಾಯಿತು.



ನಗರದ ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಬೈಕ್ ರ್‍ಯಾಲಿ ನಡೆಸಿದ ಪ್ರತಿಭಟನಾಕಾರರು, ಜಿಲ್ಲಾಧಿಕಾರಿಗಳ ಮೂಲಕ ಪ್ರಧಾನಮಂತ್ರಿ, ಕೇಂದ್ರ ಸಹಕಾರ ಸಚಿವರು ಹಾಗೂ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿದರು.

ಮನವಿಯಲ್ಲಿ, ರೈತರ ಹೋರಾಟದ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು 2020ರಲ್ಲಿ ಮೂರು ಕೃಷಿ ಕಾಯ್ದೆಗಳನ್ನು ಹಿಂಪಡೆದಿದ್ದರೂ, ರಾಜ್ಯದಲ್ಲಿ ಕೃಷಿ ಸಂಬಂಧಿತ ಕಾಯ್ದೆಗಳಲ್ಲಿ ತಿದ್ದುಪಡಿ ಮಾಡುವ ಮೂಲಕ ಕೃಷಿ ಕ್ಷೇತ್ರಕ್ಕೆ ಕಾರ್ಪೊರೇಟ್ ಕಂಪನಿಗಳ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗುತ್ತಿದೆ ಎಂದು ಆರೋಪಿಸಲಾಗಿದೆ. ವಿದ್ಯುತ್ ಉತ್ಪಾದನೆ ಸೇರಿದಂತೆ ವಿವಿಧ ಯೋಜನೆಗಳ ಹೆಸರಿನಲ್ಲಿ ಕೃಷಿ ಭೂಮಿಗಳನ್ನು ಖರೀದಿಸಲಾಗುತ್ತಿದ್ದು, ಇದರಿಂದ ರೈತರು ಕೃಷಿ ಚಟುವಟಿಕೆಗಳಿಂದ ಹೊರಗುಳಿಯುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ದೂರಲಾಗಿದೆ.

ರಾಜ್ಯದಲ್ಲಿ ಬರ ಪರಿಸ್ಥಿತಿ ಉಂಟಾಗಿರುವ ಹಿನ್ನೆಲೆಯಲ್ಲಿ ರೈತರ ಎಲ್ಲಾ ರೀತಿಯ ಸಾಲಗಳನ್ನು ಮನ್ನಾ ಮಾಡಬೇಕು. ರೈತರಿಗೆ ಪ್ರತಿ ಎಕರೆಗೆ 50 ಸಾವಿರ ರೂ. ಪರಿಹಾರ ಹಾಗೂ ಕೃಷಿ ಕಾರ್ಮಿಕರ ಪ್ರತಿ ಕುಟುಂಬಕ್ಕೆ 50 ಸಾವಿರ ರೂ. ಸಹಾಯಧನ ನೀಡಬೇಕು ಎಂದು ಒತ್ತಾಯಿಸಲಾಗಿದೆ.

ಅತೀ ಬಡವರು ಮತ್ತು ನಿರ್ಗತಿಕರಿಗೆ ಗ್ರಾಮ ಮಟ್ಟದಲ್ಲಿ ಗಂಜಿ ಕೇಂದ್ರಗಳನ್ನು ಆರಂಭಿಸಬೇಕು. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಸೇರಿದಂತೆ ಗ್ರಾಮೀಣ ಉದ್ಯೋಗ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು. ಗ್ರಾಮೀಣ ರಸ್ತೆಗಳು, ಹೊಲಗಳಿಗೆ ತೆರಳುವ ದಾರಿಗಳನ್ನು ಅಭಿವೃದ್ಧಿಪಡಿಸುವುದರ ಜೊತೆಗೆ ಸಣ್ಣ ನೀರಾವರಿ ಕೆರೆಗಳ ಹೂಳೆತ್ತುವ ಯೋಜನೆಯನ್ನು ಜಾರಿಗೆ ತರಬೇಕು ಎಂದು ಆಗ್ರಹಿಸಲಾಗಿದೆ.

ಬೀದರ್ ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆಯಾದ ಕಬ್ಬು ಬೆಳೆಗಾರರ ಹಿತದೃಷ್ಟಿಯಿಂದ ಬಿಎಸ್‌ಎಸ್‌ಕೆ ಸಕ್ಕರೆ ಕಾರ್ಖಾನೆಯನ್ನು ಪುನರಾರಂಭಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಆರ್ಥಿಕ ನೆರವು ನೀಡಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ಕಾರ್ಖಾನೆಯ ಆಡಳಿತ ಮಂಡಳಿಯಲ್ಲಿ ನಡೆದಿರುವುದಾಗಿ ಆರೋಪಿಸಲಾದ ಅಕ್ರಮಗಳ ಕುರಿತು ಕಳೆದ 15 ವರ್ಷಗಳಲ್ಲಿ ಕಾರ್ಯನಿರ್ವಹಿಸಿದ ಆಡಳಿತ ಮಂಡಳಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಿ, ಷೇರುದಾರ ರೈತರ ಹಿತಾಸಕ್ತಿಯನ್ನು ರಕ್ಷಿಸಬೇಕು ಎಂದು ಆಗ್ರಹಿಸಲಾಗಿದೆ.

ಕಾರ್ಮಿಕರ ಬಾಕಿ ವೇತನ ಸೇರಿದಂತೆ ಸುಮಾರು 38 ಕೋಟಿ ರೂ. ಬಾಕಿ ಹಣವನ್ನು ಪಾವತಿಸಬೇಕು. ಯೋಜನಾ ನೌಕರರನ್ನು ಖಾಯಂಗೊಳಿಸಬೇಕು. ಬೀದರ್ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿಧೋದ್ದೇಶ ಸಹಕಾರ ಸಂಘದ ನೌಕರರಿಗೆ ಪರಿಷ್ಕೃತ ಕನಿಷ್ಠ ವೇತನ ಹಾಗೂ ಮೀಸಲಾತಿ ಜಾರಿಗೊಳಿಸಬೇಕು. ರೈತರ ಭೂಮಿಗಳ ಸರ್ಕಾರಿ ಸರ್ವೆ ಕಾರ್ಯವನ್ನು ಸರ್ಕಾರದ ವತಿಯಿಂದಲೇ ಕೈಗೊಳ್ಳಬೇಕು ಎಂದು ಮನವಿ ಮಾಡಲಾಗಿದೆ.

ಕಳೆದ ಸಾಲಿನಲ್ಲಿ ಕಬ್ಬು ಪೂರೈಸಿದ ರೈತರಿಗೆ ಬಾಕಿ ಹಣವನ್ನು ಕೂಡಲೇ ಪಾವತಿಸಬೇಕು. ಹಿಂದಿನ ಪದ್ಧತಿಯಂತೆ ಕಬ್ಬು ಬೆಳೆಗಾರರಿಗೆ ಸಕ್ಕರೆ ವಿತರಿಸಬೇಕು. 2026ನೇ ಸಾಲಿನಲ್ಲಿ ಕಬ್ಬು ಪೂರೈಸುವ ರೈತರಿಗೆ ಪ್ರತಿ ಟನ್‌ಗೆ 5 ಸಾವಿರ ರೂ. ದರ ನಿಗದಿಪಡಿಸುವ ಕುರಿತು ರೈತರ ಸಭೆ ಕರೆಯಬೇಕು ಎಂದು ಒತ್ತಾಯಿಸಲಾಗಿದೆ.

ಒಂದು ವಾರದೊಳಗೆ ರೈತರ ಸಭೆ ಕರೆಯದಿದ್ದರೆ ಯಾವುದೇ ಪೂರ್ವ ಸೂಚನೆ ನೀಡದೇ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಮಲ್ಲಿಕಾರ್ಜುನ್ ಸ್ವಾಮಿ, ಶಿವರಾಜ್ ಪಾಟೀಲ್ ಅತಿವಾಳ್, ಶಿವರಾಯ್ ಮುದಾಳೆ, ನಜೀರ್ ಅಹ್ಮದ್, ಶಫಾಯತ್ ಅಲಿ, ವೀರಶೆಟ್ಟಿ ವಟ್ಟಂಬೆ, ಕೊಂಡಿಬಾರಾವ್ ಪಾಂಡ್ರೆ, ಧೂಳಪ್ಪ ಸೋರಳ್ಳಿ, ಚಂದ್ರಕಾಂತ್ ಪಾಟೀಲ್ ಕಪಲಾಪೂರ್, ರಾಜೇಂದ್ರ ಪಾಟೀಲ್ ಅಣದೂರವಾಡಿ, ವೀರರೆಡ್ಡಿ ಪಾಟೀಲ್, ನಾಗಶೆಟ್ಟಿ, ವಿಜಯಕುಮಾರ್ ಬಾವಗಿ, ಅರುಣ್ ಪಟೇಲ್, ಪ್ರಭು ಹೊಚಕನಳ್ಳಿ, ಪ್ರಭು ತಗಣಿಕರ್, ಶೇಕ್ ನವಾಜ್, ಖಮರ್ ಪಟೇಲ್, ಮೂಯಿದ್ ಸಂತಪೂರ್, ರಾಜಕುಮಾರ್ ಬಗದಲ್‌ಕರ್ ಬಾಬುರಾವ್ ಹೊನ್ನಾ, ಖದೀರಮಿಯ್ಯಾ, ಅಶೋಕ್ ಕಾರಬಾರಿ, ವಿಠಲ್ ರೆಡ್ಡಿ ಆಣದೂರ್, ರಾಜಕುಮಾರ್ ಸ್ವಾಮಿ, ಅಶೋಕ್ ಪಾಟೀಲ್, ಶ್ರೀವಾಸ್ ಜೋಶಿ, ಬಸವರಾಜ್ ಪಾಟೀಲ್, ರುದ್ರಸ್ವಾಮಿ, ಮಾರುತಿ ಧರಗೊಂಡ್ ಹಾಗೂ ಸನುಮ್ಖಪ್ಪ ಆಣದೂರ್ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಉಪಸ್ಥಿತರಿದ್ದರು.



# ಹಾಪ್‌ಕಾಮ್ಸ್ ಆರ್ಥಿಕ ಬಲವರ್ಧನೆಗೆ ಅಗತ್ಯ ಕ್ರಮ: ಮಲ್ಲಿಕಾರ್ಜುನ ಭೂಶೆಟ್ಟಿ

ಕಲಬುರಗಿ,ಸೆ.29-

ಕಲಬುರಗಿ-ಯಾದಗಿರಿ ಜಿಲ್ಲಾ ಹಾಪ್‌ಕಾವ್ಸ್ ಸಂಸ್ಥೆಯನ್ನು ಆರ್ಥಿಕವಾಗಿ ಮತ್ತಷ್ಟು ಸದೃಢಗೊಳಿಸುವ ಜತೆಗೆ ರೈತರಿಗೆ ಹೆಚ್ಚಿನ ಅನುಕೂಲ ಕಲ್ಪಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಸಿ. ಭೂಶೆಟ್ಟಿ ಹೇಳಿದರು.

ಸಂಸ್ಥೆಯ ಕಚೇರಿ ಆವರಣದಲ್ಲಿ ನಡೆದ 202526ನೇ ಸಾಲಿನ 27ನೇ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸಭೆಯಲ್ಲಿ ಉಪಾಧ್ಯಕ್ಷರು, ನಿರ್ದೇಶಕರು, ಸದಸ್ಯರು ಹಾಗೂ ಪ್ರಗತಿಪರ ರೈತರು ಸೇರಿದಂತೆ ನೂರಾರು ಮಂದಿ ಭಾಗವಹಿಸಿದ್ದರು.

ಸಭೆಯ ಆರಂಭದಲ್ಲಿ ಅಧ್ಯಕ್ಷ ಮಲ್ಲಿಕಾರ್ಜುನ ಭೂಶೆಟ್ಟಿ ಅವರು ನಿರ್ದೇಶಕರು ಹಾಗೂ ಸದಸ್ಯರನ್ನು ಸ್ವಾಗತಿಸಿದರು. ಬಳಿಕ ಉಪಾಧ್ಯಕ್ಷ ಸುಭಾಷಚಂದ್ರ ಬೋವಿ ಅವರು ಸಂಸ್ಥೆಯ ವಾರ್ಷಿಕ ವರದಿಯನ್ನು ಮಂಡಿಸಿದರು.

ವ್ಯವಸ್ಥಾಪಕ ನಿರ್ದೇಶಕ ಅನಿಲ ರಾಠೋಡ ಅವರು 202526ನೇ ಸಾಲಿನ ಲೆಕ್ಕಪರಿಶೋಧನಾ ವರದಿ, ಅಡವಿಗೆ ಸಂಬಂಧಿಸಿದ ಅನುದಾನ ಹಾಗೂ 2026-27ನೇ ಸಾಲಿಗೆ ಕಾಯ್ದಿರಿಸಿರುವ ಅನುದಾನದ ವಿವರಗಳನ್ನು ಸಭೆಗೆ ತಿಳಿಸಿದರು. ಸಂಸ್ಥೆಯ ಬೈಲಾ ತಿದ್ದುಪಡಿ, ಹೆಚ್ಚುವರಿ ಖರ್ಚುಭರಿಸಿದ ಅನುದಾನ ಹಾಗೂ ಕಾಯ್ದಿರಿಸಿದ ಅನುದಾನಕ್ಕೆ ಸಭೆಯಲ್ಲಿ ಸರ್ವಾನುಮತದ ಅನುಮೋದನೆ ನೀಡಲಾಯಿತು.

ಸಂಸ್ಥೆಯ ನಿರ್ದೇಶಕರಾದ ತಿಪ್ಪಣ್ಣ ರೆಡ್ಡಿ ಎಲ್. ಮತ್ತು ಬಸವರಾಜ ಆರ್. ಪಾಟೀಲ ಮಾತನಾಡಿ, ಹಾಪ್‌ಕಾಮ್ಸ್ ನ ಆರ್ಥಿಕ ಸ್ಥಿತಿಯನ್ನು ಸುಧಾರಿಸುವುದು, ರೈತರಿಂದ ಹೆಚ್ಚಿನ ಪ್ರಮಾಣದಲ್ಲಿ ಕೃಷಿ ಉತ್ಪನ್ನಗಳನ್ನು ಸಂಗ್ರಹಿಸುವುದು ಹಾಗೂ ಮಾರುಕಟ್ಟೆ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸುವ ಕುರಿತು ಸಲಹೆ-ಸೂಚನೆಗಳನ್ನು ನೀಡಿದರು.

ಸಭೆಯಲ್ಲಿ ಸದಸ್ಯರು ವಿವಿಧ ವಿಷಯಗಳ ಕುರಿತು ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು. ಸದಸ್ಯರ ಮಕ್ಕಳ ಶೈಕ್ಷಣಿಕ ಸಾಧನೆಯನ್ನು ಪ್ರೋತ್ಸಾಹಿಸುವ ಉದ್ದೇಶದಿಂದ ಮುಂದಿನ ವರ್ಷದಿಂದ ಎಸ್‌ಎಸ್‌ಎಲ್‌ಸಿ ಹಾಗೂ ದ್ವಿತೀಯ ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಗಳಿಸುವ ಸದಸ್ಯರ ಮಕ್ಕಳಿಗೆ ಬಹುಮಾನ ನೀಡುವಂತೆ ಸರ್ವಾನುಮತದಿಂದ ನಿರ್ಣಯ ಕೈಗೊಳ್ಳಲಾಯಿತು.

ಸಭೆಯಲ್ಲಿ ಸಂಸ್ಥೆಯ ನಿರ್ದೇಶಕರಾದ ಗುರುಶಾಂತ ಪಾಟೀಲ, ಉಮಾರೆಡ್ಡಿ ಭಾಸರೆಡ್ಡಿ, ರಾಜಕುಮಾರ ಕೋಟಿ, ವ್ಯವಸ್ಥಾಪಕ ಪಾಂಡುರಂಗ ಬಿ.ಎಂ. ಸೇರಿದಂತೆ ನಿರ್ದೇಶಕರು, ಸದಸ್ಯರು ಹಾಗೂ ರೈತರು ಉಪಸ್ಥಿತರಿದ್ದರು.

# ಜ್ಞಾನೇಶ್ ಕುಮಾರ್ ಬಂಧನಕ್ಕೆ ಆಗ್ರಹಿಸಿ ಕಾಂಗ್ರೆಸ್ ಪ್ರತಿಭಟನೆ




ಕಲಬುರಗಿ,ಸೆ.29-

ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ವಿಚಾರದಲ್ಲಿ ಕೇಂದ್ರ ಚುನಾವಣಾ ಆಯೋಗದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು ಏಕಪಕ್ಷೀಯವಾಗಿ ನಿರ್ಧಾರ ಕೈಗೊಂಡಿದ್ದಾರೆ ಎಂದು ಆರೋಪಿಸಿ, ಅವರನ್ನು ಬಂಧಿಸಬೇಕು ಹಾಗೂ ಪ್ರಕರಣಕ್ಕೆ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಸೋಮವಾರ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ. ಕಿರಣ್ ದೇಶಮುಖ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿ, ಚುನಾವಣಾ ಆಯೋಗದ ಎಸ್‌ಐರ್ಆ ಪ್ರಕ್ರಿಯೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನಾಕಾರರು ಕೇಂದ್ರ ಸರ್ಕಾರ ಹಾಗೂ ಚುನಾವಣಾ ಆಯೋಗದ ವಿರುದ್ಧ ಘೋಷಣೆಗಳನ್ನು ಕೂಗಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದರು.

ಈ ವೇಳೆ ಜಿಲ್ಲಾಧಿಕಾರಿಗಳ ಕಚೇರಿ ಎದುರು ಜ್ಞಾನೇಶ್ ಕುಮಾರ್ ಅವರ ಪ್ರತಿಕೃತಿಯನ್ನು ದಹಿಸಿ ಪ್ರತಿಭಟನೆ ನಡೆಸಿದ ಮುಖಂಡರು, ಎಸ್‌ಐರ್ಆ ಪ್ರಕ್ರಿಯೆಯಲ್ಲಿ ನಡೆದಿರುವ ಆರೋಪಗಳ ಕುರಿತು ಸಮಗ್ರ ಮತ್ತು ಪಾರದರ್ಶಕ ತನಿಖೆ ನಡೆಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಕಾಂಗ್ರೆಸ್ ಮುಖಂಡರು, ಎಸ್‌ಐಆರ್‌ಗೆ ಸಂಬಂಧಿಸಿದಂತೆ ಸೂಕ್ತ ಪರಿಶೀಲನೆ ನಡೆಸಿ, ಅಕ್ರಮ ಅಥವಾ ನಿಯಮ ಉಲ್ಲಂಘನೆ ನಡೆದಿದ್ದರೆ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿದರು.


ಮತದಾರರ ಪಟ್ಟಿಯ ಪರಿಷ್ಕರಣೆ ಸಂದರ್ಭದಲ್ಲಿ ಅರ್ಹ ಮತದಾರರಿಗೆ ಯಾವುದೇ ರೀತಿಯ ಅನ್ಯಾಯವಾಗದಂತೆ ಚುನಾವಣಾ ಆಯೋಗ ಪಾರದರ್ಶಕವಾಗಿ ಕಾರ್ಯನಿರ್ವಹಿಸಬೇಕು. ಮತದಾರರ ಹಕ್ಕುಗಳಿಗೆ ಧಕ್ಕೆಯಾಗದಂತೆ ಎಸ್‌ಐರ್ಆ ಪ್ರಕ್ರಿಯೆಯನ್ನು ನಡೆಸುವ ಜವಾಬ್ದಾರಿ ಚುನಾವಣಾ ಆಯೋಗದ ಮೇಲಿದೆ ಎಂದು ಕಾಂಗ್ರೆಸ್ ಮುಖಂಡರು ಹೇಳಿದರು.

ಪ್ರತಿಭಟನೆಯಲ್ಲಿ ವಿಧಾನ ಪರಿಷತ್ ಸದಸ್ಯರಾದ ತಿಪ್ಪಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ, ಮುಖಂಡರಾದ ಭೀಮರಾವ ಟಿ.ಟಿ., ಮಹಾಂತಪ್ಪ ಸಂಗಾವಿ, ಕುಡಾ ಅಧ್ಯಕ್ಷ ಮಝರ್ ಖಾನ್ ಆಲಂ, ಯುವ ಘಟಕದ ಅಧ್ಯಕ್ಷ ಶಕೀಲ್ ಸರಡಗಿ, ಚಂದ್ರಿಕಾ ಪರಮೇಶ್ವರ, ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ರೇಣುಕಾ ಸಿಂಗೆ, ಈರಣ್ಣ ಝಳಕಿ, ಶಿವಾನಂದ ಹೊನಗುಂಟಿ, ರಾಜೀವ್ ಜಾನೆ, ಅಭಿಷೇಕ್ ಪಾಟೀಲ್, ಫಾರುಕ್ ಮಾನಿಯಾಲ್, ಅಶೋಕ ವೀರನಾಯಕ್, ದಿನೇಶ ದೊಡ್ಡಮನಿ, ಕಾರ್ತಿಕ್ ನಾಟೇಕರ್ ಪರಶುರಾಮ್ ನಾಟೇಕರ್ ಟೈಗರ್ ವಿಘ್ನೇಶ್ವರ, ಮಹೇಶ್ ತೆಲ್ಲೂರಕರ್ ಧರ್ಮರಾಜ ಹೇರೂರ, ಆಸೀಫ್ ಗಾಣಗಾಪೂರಿ, ಮೋದಿನ್ ಪಟೇಲ್ ಅಣಬಿ, ಫಾರೂಕ್ ಪಟೇಲ್, ಚಂದ್ರಶೇಖರ್ ಹಡಪದ್, ಪ್ರಜ್ಞಾನಂದ ಸಂಗೊಳ್ಳಗಿ, ವಾಣಿಶ್ರೀ ಸಗರಕರ್ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿದ್ದರು.

# ಅಮಲಾಪುರ ದಲಿತರಿಗೆ ಸ್ಮಶಾನಭೂಮಿ ನೀಡುವಂತೆ ಆಗ್ರಹಿಸಿ ಪಾದಯಾತ್ರೆ; ಡಿಸಿ ಕಚೇರಿಗೆ ಮುತ್ತಿಗೆ

ಬೀದರ್,ಸೆ.29-

ಅಮಲಾಪುರ ಗ್ರಾಮದ ದಲಿತ ಸಮುದಾಯಕ್ಕೆ ಸ್ಮಶಾನಭೂಮಿ ಮಂಜೂರು ಮಾಡಿ ಪಹಣಿ ಪತ್ರಿಕೆ ನೀಡಬೇಕು ಎಂದು ಆಗ್ರಹಿಸಿ ಅಮಲಾಪುರ ಗ್ರಾಮದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಸೋಮವಾರ ಪಾದಯಾತ್ರೆ ನಡೆಸಿ ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಲಾಯಿತು.




ಅಮಲಾಪುರ ಗ್ರಾಮದಿಂದ ಸುಮಾರು 8 ರಿಂದ 10 ಕಿಲೋಮೀಟರ್ ಪಾದಯಾತ್ರೆ ನಡೆಸಿದ ಹೋರಾಟಗಾರರು ಮತ್ತು ಗ್ರಾಮಸ್ಥರು ಜಿಲ್ಲಾಧಿಕಾರಿ ಕಚೇರಿ ಎದುರು ಬ್ಯಾರಿಕೇಡ್ ತಳ್ಳುವ ಮೂಲಕ ಒಳಗೆ ಪ್ರವೇಶಿಸಲು ಯತ್ನಿಸಿದರು. ಪರಿಸ್ಥಿತಿ ಉದ್ವಿಗ್ನವಾಗುತ್ತಿದ್ದಂತೆ ಪೊಲೀಸರು ಬಿಗಿ ಬಂದೋಬಸ್ತ್ ಏರ್ಪಡಿಸಿ ದರು. ಬಳಿಕ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸ್ಥಳಕ್ಕೆ ಆಗಮಿಸಿ ಪ್ರತಿ ಭಟನಾಕಾರರೊಂದಿಗೆ ಮಾತುಕತೆ ನಡೆಸಿದರು.

ಪ್ರತಿಭಟನಾಕಾರರು ಮಾತನಾಡಿ, ಸ್ಮಶಾನಭೂಮಿ ಮಂಜೂರಾತಿಗಾಗಿ ಕಳೆದ 20 ದಿನಗಳಿಂದ ಬೀದರ್ ತಹಸೀಲ್ದಾರ್ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸುತ್ತಿದ್ದೇವೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಅವರು ಭೇಟಿ ನೀಡಿ ಎಂಟು ದಿನಗಳಲ್ಲಿ ಸ್ಮಶಾನಭೂಮಿ ಮಂಜೂರು ಮಾಡಿಕೊಡುವುದಾಗಿ ಭರವಸೆ ನೀಡಿದ್ದರೂ ಇದುವರೆಗೆ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.


ದಲಿತ ಮುಖಂಡ ರಾಹುಲ್ ಖಂದಾರೆ ಮಾತನಾಡಿ, ಅಮಲಾಪುರ ಗ್ರಾಮದಲ್ಲಿ ದಲಿತ ಸಮುದಾಯದವರು ಮೃತಪಟ್ಟರೆ ಅಂತ್ಯಸಂಸ್ಕಾರ ನಡೆಸಲು ಸ್ಮಶಾನಭೂಮಿ ಇಲ್ಲದಿರುವುದು ಅತ್ಯಂತ ದುಃಖಕರ ಸಂಗತಿ. ಸ್ಮಶಾನಭೂಮಿ ಮಂಜೂರು ಮಾಡುವಲ್ಲಿ ಜಿಲ್ಲಾಡಳಿತ ಹಾಗೂ ಜನಪ್ರತಿನಿಧಿಗಳು ವಿಳಂಬ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಇನ್ನೋರ್ವ ಮುಖಂಡ ವಿನೋದ್ ರತ್ನಾಕರ್ ಮಾತನಾಡಿ, ಸ್ಮಶಾನಭೂಮಿಗೆ ಪಹಣಿ ಪತ್ರಿಕೆ ನೀಡುವವರೆಗೂ ಪ್ರತಿಭಟನೆ ಕೈಬಿಡುವುದಿಲ್ಲ ಎಂದು ಎಚ್ಚರಿಕೆ ನೀಡಿದರು.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರೊಂದಿಗೆ ಪ್ರತಿಭಟನಾಕಾರರ ನಡುವೆ ಈ ವಿಷಯವಾಗಿ ಕೆಲಕಾಲ ವಾದ-ಪ್ರತಿವಾದ ನಡೆಯಿತು. ಜಿಲ್ಲಾಧಿಕಾರಿಗಳು 20 ದಿನಗಳಲ್ಲಿ ಸ್ಮಶಾನಭೂಮಿಯ ಪಹಣಿ ಪತ್ರಿಕೆ ನೀಡಲಾಗುವುದು ಎಂದು ಮೌಖಿಕ ಭರವಸೆ ನೀಡಿದರೂ ಪ್ರತಿಭಟನಾಕಾರರು ಲಿಖಿತ ಭರವಸೆ ನೀಡುವಂತೆ ಪಟ್ಟು ಹಿಡಿದರು. ಕೊನೆಗೆ ಸ್ಮಶಾನಭೂಮಿಗೆ ಇಂದಿನಿಂದಲೇ ಕಾಂಪೌಂಡ್ ನಿರ್ಮಾಣ ಕಾಮಗಾರಿ ಆರಂಭಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಭರವಸೆ ನೀಡಿದ ಬಳಿಕ ಪ್ರತಿಭಟನೆಯನ್ನು ಹಿಂತೆಗೆದುಕೊಳ್ಳಲಾಯಿತು.

ಪ್ರತಿಭಟನೆಯಲ್ಲಿ ವಿವಿಧ ದಲಿತ ಸಂಘಟನೆಗಳ ಮುಖಂಡರು ಹಾಗೂ ಅಮಲಾಪುರ ಗ್ರಾಮದ ನೂರಾರು ಗ್ರಾಮಸ್ಥರು ಭಾಗವಹಿಸಿದ್ದರು.

ನಿಮ್ಮೂರು ಸುದ್ದಿ

## ಸಂಪಾದಕೀಯ



# ಬರ, ಸರ್ವಪಕ್ಷ ನಿಯೋಗ ಮತ್ತು ರಾಜಕಾರಣಿಗಳ ಕಪಟ ನಾಟಕ

ಯಾವ ಪಕ್ಷ ಅಧಿಕಾರದಲ್ಲಿದ್ದರೂ, ಯಾರೇ ಮುಖ್ಯಮಂತ್ರಿಗಳಾಗಿದ್ದರೂ ಪ್ರಕೃತಿ ವಿಕೋಪದಿಂದ ಪಾರಾಗುವುದು ಸಾಧ್ಯವಿಲ್ಲ. ಹೀಗಾಗಿ ಬರಗಾಲ ನಿರ್ವಹಣೆ ಸರ್ಕಾರಕ್ಕೆ ಎಷ್ಟು ಜವಾಬ್ದಾರಿ ಇದೆಯೋ ಅಷ್ಟೇ ಪ್ರತಿಪಕ್ಷಗಳಿಗೂ ಇದೆ. ಒಕ್ಕೂಟ ವ್ಯವಸ್ಥೆಯನ್ನು ಒಪ್ಪಿಕೊಂಡಿರುವುದರಿಂದ ಕೇಂದ್ರ ಸರ್ಕಾರದ ಜವಾಬ್ದಾರಿ ಇನ್ನೂ ಹೆಚ್ಚಿದೆ.

ರಾಜ್ಯದಲ್ಲಿ ಬರಪೀಡಿತ ತಾಲೂಕುಗಳ ಸಂಖ್ಯೆ 200 ದಾಟಿದ್ದು, ಕೇಂದ್ರ ಸರ್ಕಾರದಿಂದ ಬರ ಪರಿಹಾರ ಪಡೆದುಕೊಳ್ಳಲು ಪ್ರಧಾನಿ ಹಾಗೂ ಕೇಂದ್ರ ಸಚಿವರನ್ನು ಭೇಟಿ ಮಾಡಲು ಸರ್ವಪಕ್ಷ ನಿಯೋಗ ಕರೆದೊಯ್ಯಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ಆದರೆ, ಬಿಜೆಪಿ ನಾಯಕರು, ಬರ ನಿರ್ವಹಣೆ ಮಾಡುವಲ್ಲಿ ಸರ್ಕಾರ ವಿಫಲವಾಗಿದೆ. ಸಚಿವರು ಬರ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿಲ್ಲ. ರಾಜ್ಯ ಸರ್ಕಾರ ಬರ ಪರಿಹಾರವನ್ನು ಮೊದಲು ಘೋಷಣೆ ಮಾಡಲಿ ಎಂದು ಪಟ್ಟು ಹಿಡಿದು ನಿಯೋಗದೊಂದಿಗೆ ತೆರಳಲು ಹಿಂದೇಟು ಹಾಕಿದ್ದಾರೆ.

ಇವೆರಡು ರಾಷ್ಟ್ರೀಯ ಪಕ್ಷಗಳಾದ ಕಾಂಗ್ರೆಸ್ ಮತ್ತು ಬಿಜೆಪಿ ನಿಲುವಾದರೆ, ಜಾತ್ಯತೀತ ಜನತಾದಳದ ಮುಖಂಡ, ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿಯವರು, ಬರ ಸಂಬಂಧ ಸರ್ವಪಕ್ಷ ನಿಯೋಗವನ್ನು ದಿಲ್ಲಿಗೆ ಕರೆದೊಯ್ದು ಏನು ಮಾಡುತ್ತೀರಿ, ಅನಗತ್ಯ ಖರ್ಚು. ನೀವೇ ಹೋಗಿ ಮಾತನಾಡಿಕೊಂಡು ಬರಲು ಆಗುವುದಿಲ್ಲವೇ ಎಂದು ಪ್ರಶ್ನಿಸಿದ್ದಾರೆ.

ಕುಮಾರಸ್ವಾಮಿಯವರ ಪ್ರಶ್ನೆಗೆ ಉತ್ತರಿಸಿದ ಸಿಎಂ ಶಿವಕುಮಾರ್, ಬರ ಪರಿಸ್ಥಿತಿಯು ಯಾವುದೇ ಒಂದು ಪಕ್ಷಕ್ಕೆ ಸೀಮಿತವಾಗಿಲ್ಲ, ಇದು ರಾಜ್ಯದ ಜನರ ಹಿತಾಸಕ್ತಿಯ ವಿಷಯ. ಆದ್ದರಿಂದ ಬಿಜೆಪಿ ಮತ್ತು ಜೆಡಿಎಸ್ ನಾಯಕರು ಸಹ ಈ ನಿಯೋಗದಲ್ಲಿ ಭಾಗವಹಿಸಬೇಕು. ಒಂದು ವೇಳೆ ನಿಯೋಗದ ಜೊತೆ ಬರದಿದ್ದರೆ ರೈತರ ವಿಷಯದಲ್ಲಿ ಅವರದ್ದು ಕಪಟ ನಾಟಕ ಎಂಬುದು ಸಾಬೀತಾಗುತ್ತದೆ ಎಂದು ಕೊಂಚ ಕಟುವಾಗಿಯೇ ಹೇಳಿದ್ದಾರೆ.

ಅದಕ್ಕೆ ಉತ್ತರವಾಗಿ ಕುಮಾರಸ್ವಾಮಿಯವರು, 2018ರಲ್ಲಿ ನಾನು ರೈತರ ಸಾಲ ಮನ್ನಾ ಮಾಡಿದಾಗ ಕಾಂಗ್ರೆಸ್ ಬೆಂಬಲಿಸಲಿಲ್ಲ. ಅದು ನಿಮ್ಮ ಭರವಸೆ, ಅದಕ್ಕೂ ನಮಗೂ ಸಂಬಂಧವಿಲ್ಲ ಎಂದು ಹೇಳಿದ್ದರು ಎಂದು ಕಾಂಗ್ರೆಸ್ಸಿಗರನ್ನು ಕುಟುಕಿದ್ದಾರೆ.

ಅಂದರೆ, ರಾಜ್ಯದಲ್ಲಿ ಭೀಕರ ಬರ ಪರಿಸ್ಥಿತಿ ಇರುವಾಗಲೂ, ಮೂರೂ ಪಕ್ಷಗಳ ರಾಜಕಾರಣಿಗಳಿಗೆ ಅವರ ಕ್ಷುಲ್ಲಕ ರಾಜಕಾರಣವೇ ಮುಖ್ಯವಾಗಿದೆ. ಮಳೆ ಬರದೆ, ಬೆಳೆ ಕೈಗೆ ಸಿಗದೆ ಆಗಿರುವ ಕಷ್ಟ-ನಷ್ಟಗಳು ಕಾಣುತ್ತಿಲ್ಲ. ಮನೆ, ಮಠ ಬಿಟ್ಟು ಗುಳೆ ಹೋಗುತ್ತಿರುವುದು, ಜನಪ್ರತಿನಿಧಿಗಳ ವೈಫಲ್ಯ ಎನಿಸುತ್ತಿಲ್ಲ. ಬರ ಕೂಡ ಆರೋಪ ಪ್ರತ್ಯಾರೋಪಕ್ಕೆ, ಮಾಧ್ಯಮಗಳ ಚಿಲ್ಲರೆ ಪ್ರಚಾರಕ್ಕೆ, ಸ್ವಾರ್ಥ ರಾಜಕಾರಣಕ್ಕೆ ಬಳಕೆಯಾಗುತ್ತಿರುವುದು ದುರಂತ.

ಅಷ್ಟಕ್ಕೂ ಬರ ಪರಿಹಾರಕ್ಕಾಗಿ ಸರ್ವಪಕ್ಷ ನಿಯೋಗ ಹೋಗುವುದು ಪ್ರಜಾಪ್ರಭುತ್ವದಲ್ಲಿ ಹಲವು ಕಾರಣಗಳಿಂದ ಮಹತ್ವದ ಸಂಗತಿಯಾಗಿದೆ. ಸರ್ವಪಕ್ಷ ನಿಯೋಗ ಎಂದರೆ ಕೇವಲ ರಾಜಕೀಯ ಕಾರ್ಯಕ್ರಮವಲ್ಲ, ವಿವಿಧ ಪಕ್ಷಗಳ ಪ್ರತಿನಿಧಿಗಳು ಒಂದಾಗಿ ಹೋಗುವುದು. ಅದು ಕೇವಲ ಒಂದು ಪಕ್ಷದ ಬೇಡಿಕೆಯಲ್ಲ, ಜನರ ಸಾಮೂಹಿಕ ಬೇಡಿಕೆ ಎಂಬ ಸಂದೇಶ ರವಾನಿಸುವುದು. ಕೇಂದ್ರದ ಮುಂದೆ ನಷ್ಟದ ಅಂಕಿಅಂಶಗಳು, ರೈತರ ಸಮಸ್ಯೆಗಳು ಮತ್ತು ಬೆಳೆ ಪರಿಹಾರದ ಅಗತ್ಯಗಳನ್ನು ಅಧಿಕೃತವಾಗಿ ಮಂಡಿಸಿ ಒಗ್ಗಟ್ಟು ಪ್ರದರ್ಶಿಸುವುದು. ರಾಜ್ಯದಿಂದ ಆಯ್ಕೆಯಾದ ಸಂಸದರು ಮತ್ತು ಕೇಂದ್ರ ಸಚಿವರೊಂದಿಗೆ ನೇರವಾಗಿ ಚರ್ಚಿಸುವುದರಿಂದ ಪರಿಹಾರದ ಬೇಡಿಕೆಗಳನ್ನು ಸಂಬಂಧಿತ ಕೇಂದ್ರ ಸಚಿವಾಲಯಗಳ ಗಮನಕ್ಕೆ ತರುವುದು. ತುರ್ತಾಗಿ ಸ್ಪಂದಿಸಲು ಒತ್ತಾಯಿಸುವುದು. ರಾಜ್ಯದ ಹಿತಾಸಕ್ತಿಯ ವಿಷಯದಲ್ಲಿ ಆಡಳಿತ ಪಕ್ಷ ಮತ್ತು ವಿರೋಧ ಪಕ್ಷಗಳು ಒಟ್ಟಾಗಿ ಕೆಲಸ ಮಾಡುವುದರಿಂದ ಪ್ರಜಾಪ್ರಭುತ್ವವನ್ನು ಬಲಗೊಳಿಸುವುದು.

ಈ ನಿಟ್ಟಿನಲ್ಲಿ ರಾಜ್ಯದಿಂದ ಆಯ್ಕೆಯಾಗಿರುವ 28 ಮಂದಿ ಸಂಸದರು ಪಕ್ಷಭೇದ ಮರೆತು, ರಾಜಕಾರಣವನ್ನು ಪಕ್ಕಕ್ಕಿಟ್ಟು ನಾಡಿಗೆ ಎದುರಾಗಿರುವ ಭೀಕರ ಬರಕ್ಕೆ, ಸಂತ್ರಸ್ತರ ಸಂಕಷ್ಟಕ್ಕೆ ಸ್ಪಂದಿಸಬೇಕಾಗಿದೆ.

ಜನರ ಬದುಕಿಗೆ ನೇರವಾಗಿ ಸಂಬಂಧಿಸಿದ ತುರ್ತು ಪರಿಹಾರ ಘೋಷಿಸುವಲ್ಲಿ ರಾಜ್ಯಗಳ ಜವಾಬ್ದಾರಿ ಹೆಚ್ಚಿದೆ, ನಿಜ. ಆದರೆ ತೆರಿಗೆ ಸಂಗ್ರಹಿಸುವ ಅಧಿಕ ಅಧಿಕಾರ ಕೇಂದ್ರದ ಪಾಲಾಗಿದೆ. ಹೀಗೆ ನಮ್ಮ ಸಂವಿಧಾನವೇ ಬಲವಾದ ಕೇಂದ್ರ ಮತ್ತು ಬಲಹೀನ ರಾಜ್ಯಗಳನ್ನು ಸೃಷ್ಟಿಸಿದೆ. ಹಾಗೆಂದು ಈ ಸ್ಥಿತಿಯಲ್ಲೇ ಮುಂದುವರಿಯಬೇಕೆಂದಿಲ್ಲ. ಕೇಂದ್ರವನ್ನು ಬಲಗೊಳಿಸುವ ರಾಜ್ಯಗಳು, ರಾಜ್ಯಗಳಿಂದ ಗೆದ್ದು ಹೋಗಿ ಕೇಂದ್ರಕ್ಕೆ ಶಕ್ತಿ ತುಂಬುವ ಸಂಸದರ ಪಾತ್ರ, ಇಲ್ಲಿ ಬಹಳ ಮುಖ್ಯವಾಗಿದೆ.

ಸದ್ಯಕ್ಕೆ ಬಿಜೆಪಿ ಮತ್ತು ಜೆಡಿಎಸ್ ಮೈತ್ರಿಯಿಂದ ಗೆದ್ದವರು 19 ಸಂಸದರು. ಅವರಲ್ಲಿ ಬಿಜೆಪಿಯ ಪ್ರಲ್ಹಾದ್ ಜೋಶಿ, ವಿ. ಸೋಮಣ್ಣ, ಶೋಭಾ ಕರಂದ್ಲಾಜೆ ಮತ್ತು ಜೆಡಿಎಸ್‌ನ ಎಚ್.ಡಿ. ಕುಮಾರಸ್ವಾಮಿಯವರು ಕೇಂದ್ರದಲ್ಲಿ ಸಚಿವರಾಗಿದ್ದಾರೆ. ನೀತಿ ನಿರ್ಣಾಯಕ ಸ್ಥಾನದಲ್ಲಿದ್ದಾರೆ. ಇವರೆಲ್ಲರೂ ಒಟ್ಟಾಗಿ ಪ್ರಧಾನಮಂತ್ರಿಗಳ ಮುಂದೆ ಹೋದರೆ, ರಾಜ್ಯದ ಜನತೆಯ ಸ್ಥಿತಿ-ಗತಿಗಳನ್ನು ಮನದಟ್ಟು ಮಾಡಿಸಿದರೆ, ಬರ ಪರಿಹಾರ ಬಿಡುಗಡೆ ಕಷ್ಟವಲ್ಲ. ಕರ್ನಾಟಕ ಹೊರತುಪಡಿಸಿ ಪ್ರಧಾನಿ ಮೋದಿಯವರು ಕೂಡ ಆಡಳಿತ ಮಾಡಲು ಸಾಧ್ಯವಿಲ್ಲ.

ಎದುರಾಗಿರುವ ಬರಗಾಲವು ಕೇವಲ ಕೃಷಿಗೆ, ಕೃಷಿ ಕೂಲಿ ಕಾರ್ಮಿಕರಿಗೆ ಮಾತ್ರ ಸಂಬಂಧಿಸಿದ್ದಲ್ಲ. ಕುಡಿಯುವ ನೀರಿನ ಕೊರತೆಯಿಂದ ಹಿಡಿದು ಜಲಾಶಯಗಳ ನೀರಿನ ಮಟ್ಟ ಕುಸಿತ, ಜಾನುವಾರುಗಳಿಗೆ ಮೇವು ಮತ್ತು ನೀರಿನ ಅಭಾವ, ಕೈಗಾರಿಕೆಗಳಿಗೆ ನೀರಿನ ಲಭ್ಯತೆಯಲ್ಲಿ ವ್ಯತ್ಯಾಸ ಹಾಗೂ ವಿದ್ಯುತ್ ಉತ್ಪಾದನೆವರೆಗೂ ಅದರ ಪರಿಣಾಮ ಬೀರುತ್ತದೆ. ಹಾಗಾಗಿ ಅದು ಪರಿಸರ, ಕೃಷಿ, ಆರ್ಥಿಕ ಹಾಗೂ ಸಾಮಾಜಿಕ ಕ್ಷೇತ್ರಗಳ ಮೇಲೆ ಸಂಕೀರ್ಣ ಸಮಸ್ಯೆಗಳನ್ನು ಸೃಷ್ಟಿಸುತ್ತದೆ. ಅಷ್ಟೇ ಅಲ್ಲ, ಆಹಾರ ಭದ್ರತೆ ಮತ್ತು ಗ್ರಾಮೀಣ ಆರ್ಥಿಕತೆಯ ಮೇಲೆ ಗಂಭೀರ ಪರಿಣಾಮ ಬೀರುತ್ತದೆ. ಇದರ ಪರಿಣಾಮವಾಗಿ ಸಾಲದ ಹೊರೆ, ನಿರುದ್ಯೋಗ, ವಲಸೆ ಮತ್ತು ಸಾಮಾಜಿಕ ಅಸಮಾನತೆ ಹೆಚ್ಚಾಗುವ ಸಾಧ್ಯತೆ ಇರುತ್ತದೆ. ಇದು ಶಿಕ್ಷಣ, ಆರೋಗ್ಯ ಮತ್ತು ಜೀವನಮಟ್ಟದ ಮೇಲೂ ಪ್ರತಿಕೂಲ ಪರಿಣಾಮ ಉಂಟುಮಾಡುತ್ತದೆ.

ಇಷ್ಟೆಲ್ಲ ಸಮಸ್ಯೆಗಳನ್ನು ತಂದೊಡ್ಡುವ ಬರ ಹೊಸದಲ್ಲ. ಯಾವ ಪಕ್ಷ ಅಧಿಕಾರದಲ್ಲಿದ್ದರೂ, ಯಾರೇ ಮುಖ್ಯಮಂತ್ರಿಗಳಾಗಿದ್ದರೂ ಪ್ರಕೃತಿ ವಿಕೋಪದಿಂದ ಪಾರಾಗುವುದು ಸಾಧ್ಯವಿಲ್ಲ. ಹೀಗಾಗಿ ಬರಗಾಲ ನಿರ್ವಹಣೆ ಸರ್ಕಾರಕ್ಕೆ ಎಷ್ಟು ಜವಾಬ್ದಾರಿ ಇದೆಯೋ ಅಷ್ಟೇ ಪ್ರತಿಪಕ್ಷಗಳಿಗೂ ಇದೆ. ಒಕ್ಕೂಟ ವ್ಯವಸ್ಥೆಯನ್ನು ಒಪ್ಪಿಕೊಂಡಿರುವುದರಿಂದ ಕೇಂದ್ರ ಸರ್ಕಾರದ ಜವಾಬ್ದಾರಿ ಇನ್ನೂ ಹೆಚ್ಚಿದೆ.

ಪ್ರತಿಪಕ್ಷಗಳು ಹಾಗೂ ಕೇಂದ್ರ ಸರ್ಕಾರ ಈ ಜವಾಬ್ದಾರಿಯಿಂದ ನುಣುಚಿಕೊಂಡರೆ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದಂತೆ, ಅವರದು ಕಪಟ ನಾಟಕ ಎನ್ನುವುದು ಸಾಬೀತಾಗುತ್ತದೆ. ಹಾಗೆಯೇ ಅವರನ್ನು ಟೀಕಿಸಲು, ವ್ಯಂಗ್ಯವಾಡಲು ಭೀಕರ ಬರಗಾಲವನ್ನೂ ಬಳಸಿಕೊಂಡರೆ, ರಾಜ್ಯ ಸರ್ಕಾರ ಕೂಡ ಸ್ಪಂದಿಸದಿದ್ದರೆ, ಇವರದು ಕೂಡ ಕಪಟ ನಾಟಕವೇ. ನಾಟಕಕ್ಕೆ ತೆರೆ ಎಳೆಯಿರಿ, ಮನುಷ್ಯರಾಗಿ.

# ‘ಪಿತೃಪ್ರಭುತ್ವವನ್ನು ಧ್ವಂಸ ಮಾಡಿ’: ಮನುವಾದ ಮತ್ತು ಫ್ಯಾಸಿಸಂ ವಿರುದ್ಧ ರಾಹುಲ್ ಗಾಂಧಿ ಸಮರ!

ಸ್ವತಂತ್ರ ಭಾರತ 80 ವರ್ಷಗಳನ್ನು ಪೂರೈಸುತ್ತಿರುವಾಗ, ನಾವು ಕೇಳಬೇಕಾಗಿದೆ, ಆ ಮನಸ್ಥಿತಿ ಹೋಗಿದೆಯೇ? ಇಲ್ಲ. ಪುಸ್ತಕವನ್ನು ಸುಡಲಾಗಿರಬಹುದು, ಆದರೆ ಮನುಸ್ಮೃತಿಯ ಮನಸ್ಥಿತಿ, ಮನುವಾದ, ಹೆಚ್ಚು ಅತ್ಯಾಧುನಿಕ ಮತ್ತು ಅದೃಶ್ಯ ರೂಪಗಳಲ್ಲಿ ಅಸ್ತಿತ್ವದಲ್ಲಿದೆ.

ಪುಣೆಯಲ್ಲಿ ನಡೆದ ಛಾತ್ರೋಂ ಕಿ ಗೊಂಜ್ ಕಾರ್ಯಕ್ರಮದಲ್ಲಿ ಯುವ ವಿದ್ಯಾರ್ಥಿನಿಯರಿಗೆ ರಾಹುಲ್ ಗಾಂಧಿ ''ಪಿತೃಪ್ರಭುತ್ವವನ್ನು ಧ್ವಂಸ ಮಾಡಿ'' ಎಂದು ಹೇಳಿದಾಗ, ಅದು ಕೇವಲ ಒಂದು ಘೋಷಣೆಯಾಗಿರಲಿಲ್ಲ. ಅದು ರಾಜಕೀಯ ಕರೆಯಾಗಿತ್ತು. ಮತ್ತು ಅದರ ನಂತರ ಕೇಳಿಬಂದ ಚಪ್ಪಾಳೆಯು ಕೇವಲ ಪ್ರೇಕ್ಷಕರಲ್ಲಿದ್ದ ಜೆನ್ ಮಹಿಳೆಯರಿಂದ ಮಾತ್ರ ಬರಲಿಲ್ಲ. ತಮ್ಮ ಮನೆಗಳಲ್ಲಿ, ಕೆಲಸದ ಸ್ಥಳಗಳಲ್ಲಿ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಪಿತೃಪ್ರಭುತ್ವದ ವಿರುದ್ಧ ಹೋರಾಡುತ್ತಾ, ಸಂಧಾನ ಮಾಡುತ್ತಾ ತಮ್ಮ ಇಡೀ ಜೀವನವನ್ನು ಕಳೆದ ಜೆನ್ ಮಹಿಳೆಯರಿಂದಲೂ ಅಷ್ಟೇ ಜೋರಾಗಿ ಬಂದಿತು.




ಈ ಕರೆಯನ್ನು ಪುಣೆಯಲ್ಲಿ ನೀಡಲಾಗಿದೆ ಎಂಬುದೇ ಇತಿಹಾಸ ಪೂರ್ಣ ವೃತ್ತವನ್ನು ಪೂರ್ಣಗೊಳಿಸಿದಂತಿದೆ. 15ನೇ ಶತಮಾನದಲ್ಲಿ, ಇದೇ ನೆಲದಿಂದ ಬಂದ ಜಿಜಾಬಾಯಿ ತನ್ನ ಕಾಲದ ಪಿತೃಪ್ರಭುತ್ವವನ್ನು ಧ್ವಂಸ ಮಾಡಿದರು. ಅವರಿಗೆ ನಿಗದಿಪಡಿಸಿದ ಪಾತ್ರಕ್ಕೆ ಸೀಮಿತರಾಗಲು ನಿರಾಕರಿಸಿದರು, ಮರಾಠಾ ಸಾಮ್ರಾಜ್ಯದ ಹಿಂದಿನ ಶಕ್ತಿ ಮತ್ತು ತಂತ್ರಗಾರರಾದರು. ಪಿತೃಪ್ರಭುತ್ವವನ್ನು ಧ್ವಂಸ ಮಾಡುವುದು ಭಾರತಕ್ಕೆ ಹೊಸದಲ್ಲ, ನಮ್ಮ ಪ್ರತಿರೋಧದ ಇತಿಹಾಸದಲ್ಲಿದೆ ಎಂದು ಅವರು ಸಾಬೀತುಪಡಿಸಿದರು.

ಇಂದು ಪಿತೃಪ್ರಭುತ್ವವನ್ನು ಧ್ವಂಸ ಮಾಡುವುದು ಏಕೆ ಮುಖ್ಯ ಎಂಬುದನ್ನು ಅರ್ಥಮಾಡಿಕೊಳ್ಳಲು, ಪಿತೃಪ್ರಭುತ್ವ ಎಂದರೆ ನಿಜವಾಗಿ ಏನು ಎಂಬುದನ್ನು ನಾವು ಅರ್ಥಮಾಡಿಕೊಳ್ಳಬೇಕು. ಪಿತೃಪ್ರಭುತ್ವ ಮತ್ತು ಫ್ಯಾಸಿಸಂ () ಎರಡು ಪ್ರತ್ಯೇಕ ವ್ಯವಸ್ಥೆಗಳಲ್ಲ, ಅವು ಪರಸ್ಪರ ಅವಲಂಬಿತವಾಗಿವೆ. ಅವು ಪರಸ್ಪರ ಶಕ್ತಿಯನ್ನು ಪಡೆದು ಬಲಿಷ್ಠವಾಗಿ ಮತ್ತು ಶಾಶ್ವತವಾಗುತ್ತವೆ. ಪಿತೃಪ್ರಭುತ್ವದ ಸಮಾಜವು ಫ್ಯಾಸಿಸಂಗೆ ಏನು ನೀಡುತ್ತದೆ? ಸಿದ್ಧಪಡಿಸಿದ ಮಾದರಿಯನ್ನು ನೀಡುತ್ತದೆ. ಪುರುಷರು ಮತ್ತು ಮಹಿಳೆಯರಿಗೆ ನಿರ್ದಿಷ್ಟ ಪಾತ್ರಗಳು, ಕಟ್ಟುನಿಟ್ಟಾದ ರಚನೆಗಳು, ಶ್ರೇಣೀಕೃತ ನಿಯಂತ್ರಣ, ಪ್ರಶ್ನಾತೀತ ಸಾಮಾಜಿಕ ವ್ಯವಸ್ಥೆ ಮತ್ತು ಒಂದೇ ನೈತಿಕ ಅಧಿಕಾರ, ಇದು ಫ್ಯಾಸಿಸಂ ಬೆಳೆಯಲು ಪರಿಪೂರ್ಣ ಸೂತ್ರವಾಗಿದೆ. ತಂದೆ, ಜಾತಿಯ ಮುಖ್ಯಸ್ಥ ಅಥವಾ ಧಾರ್ಮಿಕ ಮುಖಂಡನನ್ನು ಪಾಲಿಸಲು ಈಗಾಗಲೇ ತರಬೇತಿ ಪಡೆದಿರುವ ಸಮಾಜವು ಸರ್ವಾಧಿಕಾರಿ ನಾಯಕನನ್ನು ಸುಲಭವಾಗಿ ಪಾಲಿಸುತ್ತದೆ. ಮತ್ತು ಈ ಸಾಮಾಜಿಕ ಶ್ರೇಣೀಕರಣವು ಕ್ರೋನಿ ಬಂಡವಾಳಶಾಹಿಯ ( ) ಆರ್ಥಿಕ ಶಕ್ತಿಯಿಂದ ಬೆಂಬಲಿತವಾದಾಗ, ಅದು ಬಹುತೇಕ ಮುರಿಯಲಾಗದಂತಾಗುತ್ತದೆ. ಕ್ರೋನಿ ಬಂಡವಾಳಶಾಹಿಯು ಪಿತೃಪ್ರಭುತ್ವವನ್ನು ಜಾರಿಗೊಳಿಸುತ್ತದೆ ಏಕೆಂದರೆ ಅದಕ್ಕೆ ಅಗ್ಗದ () ಕಾರ್ಮಿಕರು, ಮಹಿಳೆಯರ ಪಾವತಿಯಾಗದ () ಆರೈಕೆ ಕೆಲಸ ಮತ್ತು ಆರ್ಥಿಕ ಲೂಟಿಯ ವಿರುದ್ಧ ಒಗ್ಗೂಡದ ವಿಭಜಿತ ಸಮಾಜ ಬೇಕು.

ಅದಕ್ಕಾಗಿಯೇ 25ನೇ ಡಿಸೆಂಬರ್ 1927 ರಂದು ಬಾಬಾಸಾಹೇಬ್ ಅಂಬೇಡ್ಕರ್ ಮಾಡಿದ ಕ್ರಿಯೆ ಈ ಚರ್ಚೆಗೆ ಇಂದಿಗೂ ಅತ್ಯಂತ ಕೇಂದ್ರವಾಗಿದೆ. ಅವರು ಸಾರ್ವಜನಿಕವಾಗಿ ಮನುಸ್ಮೃತಿಯನ್ನು ಸುಟ್ಟಾಗ, ಅವರು ಕೇವಲ ಪುಸ್ತಕವನ್ನು ಸುಡುತ್ತಿರಲಿಲ್ಲ. ಅವರು ಭಾರತದಲ್ಲಿ ಶ್ರೇಣೀಕರಣದ ಮೂಲ ( ) ಸಂಕೇತವನ್ನು ಸುಡುತ್ತಿದ್ದರು. ಮನುಸ್ಮೃತಿಯು ಜಾತಿ ವ್ಯವಸ್ಥೆಯನ್ನು ಕಾನೂನುಬದ್ಧಗೊಳಿಸಿತು, ಅಸ್ಪೃಶ್ಯತೆಯನ್ನು ಸಾಂಸ್ಥಿಕಗೊಳಿಸಿತು ಮತ್ತು ಮಹಿಳೆಯರ ಸಂಪೂರ್ಣ ಅಧೀನತೆಯನ್ನು ಕ್ರೋಡೀಕರಿಸಿತು.

ಇಂದು, ಸ್ವತಂತ್ರ ಭಾರತ 80 ವರ್ಷಗಳನ್ನು ಪೂರೈಸುತ್ತಿರುವಾಗ, ನಾವು ಕೇಳಬೇಕಾಗಿದೆ, ಆ ಮನಸ್ಥಿತಿ ಹೋಗಿದೆಯೇ? ಇಲ್ಲ. ಪುಸ್ತಕವನ್ನು ಸುಡಲಾಗಿರಬಹುದು, ಆದರೆ ಮನುಸ್ಮೃತಿಯ ಮನಸ್ಥಿತಿ, ಮನುವಾದ, ಹೆಚ್ಚು ಅತ್ಯಾಧುನಿಕ ಮತ್ತು ಅದೃಶ್ಯ ರೂಪಗಳಲ್ಲಿ ಅಸ್ತಿತ್ವದಲ್ಲಿದೆ. ನಾವು ಅದನ್ನು ಜಾತಿ ತಾರತಮ್ಯದಲ್ಲಿ, ವರ್ಗ ಶ್ರೇಷ್ಠತೆಯ ಭಾವನೆಯಲ್ಲಿ, ಲಿಂಗ ಹಿಂಸೆಯಲ್ಲಿ, ಪ್ರಾದೇಶಿಕ ಮತ್ತು ಭಾಷಾ ಶ್ರೇಷ್ಠತೆಯಲ್ಲಿ, ಕೆಲವು ಭಾರತೀಯರು ಇತರರಿಗಿಂತ ಹೆಚ್ಚು ಭಾರತೀಯರು ಎಂಬ ಕಲ್ಪನೆಯಲ್ಲಿ ನೋಡುತ್ತೇವೆ.

ನಮ್ಮ ಶ್ರೇಷ್ಠ ಸಮಾಜ ಸುಧಾರಕರು ಮತ್ತು ನಾಯಕರು ಇದನ್ನು ಅರ್ಥಮಾಡಿಕೊಂಡಿದ್ದರು. ಜ್ಯೋತಿರಾವ್ ಫುಲೆ, ಪೆರಿಯಾರ್, ಪಿ.ಎನ್. ರಾಜಭೋಜ್, ನೆಹರು, ರಾಮ್ ಮನೋಹರ್ ಲೋಹಿಯಾ ಅವರೆಲ್ಲರೂ ಹಿಂದುಳಿದ ಮನುಸ್ಮೃತಿಯನ್ನು ಬಲವಾಗಿ ವಿರೋಧಿಸಿದರು, ಅದು ಆಳವಾದ ಸಾಮಾಜಿಕ ಅಸಮಾನತೆ ಮತ್ತು ಶಾಶ್ವತ ವಿಭಜನೆಯನ್ನು ಉತ್ತೇಜಿಸುತ್ತದೆ ಎಂದು ಅವರಿಗೆ ತಿಳಿದಿತ್ತು. ನಂತರ, ಕಾನ್ಷಿ ರಾಮ್ ಅವರು ಮನುವಾದಿ ಮೂಲನಿವಾಸಿ ಎಂಬ ತಮ್ಮ ಪ್ರಬಲ ಸೂತ್ರದೊಂದಿಗೆ ಇಡೀ ರಾಜಕೀಯ ನಿರೂಪಣೆಯನ್ನು ಮರುರೂಪಿಸಿದರು. ಅದು ಕೇವಲ ಘೋಷಣೆಯಾಗಿರಲಿಲ್ಲ, ಅದು ಬಹುಜನರು, ಆದಿವಾಸಿಗಳು, ಒಬಿಸಿಗಳು, ಅಲ್ಪಸಂಖ್ಯಾತರು ಮತ್ತು ಮಹಿಳೆಯರು, ಮೂಲನಿವಾಸಿಗಳನ್ನು ಒಗ್ಗೂಡಿಸಿ ಮನುವಾದಿ ಪ್ರಾಬಲ್ಯದಿಂದ ರಾಜಕೀಯ ಅಧಿಕಾರವನ್ನು ಕಸಿದುಕೊಳ್ಳಲು ವಿನ್ಯಾಸಗೊಳಿಸಲಾದ ರಾಜಕೀಯ ತಂತ್ರವಾಗಿತ್ತು.

ಹಲವು ದಶಕಗಳ ಪ್ರಗತಿಯ ನಂತರ, ನಾವು ಹಿಮ್ಮುಖವನ್ನು ನೋಡುತ್ತಿದ್ದೇವೆ. ಫ್ಯಾಸಿಸ್ಟ್ ಶಕ್ತಿಗಳು ಅಧಿಕಾರವನ್ನು ಆಕ್ರಮಿಸಿಕೊಂಡಿರುವುದರಿಂದ, ಅಂಬೇಡ್ಕರ್ ಅವರು ಹೋರಾಡಿದ ಸಾಮಾಜಿಕ ಶ್ರೇಣೀಕರಣವು ಮತ್ತೆ ಹೆಚ್ಚು ಗೋಚರವಾಗಿ ಆಕಾರ ಪಡೆಯುತ್ತಿದೆ. ಅದಕ್ಕಾಗಿಯೇ ಮನುಸ್ಮೃತಿಯ ಮನಸ್ಥಿತಿಯ ವಿರುದ್ಧ ರಾಹುಲ್ ಗಾಂಧಿಯವರ ಪ್ರಬಲ ಮತ್ತು ಸ್ಥಿರವಾದ ಧ್ವನಿಯು ಆಡಳಿತಾರೂಢ ವ್ಯವಸ್ಥೆ ಮತ್ತು ಅದರ ಸೈದ್ಧಾಂತಿಕ ಸಹವರ್ತಿಗಳಿಗೆ ಹಿಡಿಸಿಲ್ಲ. ಏಕೆಂದರೆ ಅದು ನೇರವಾಗಿ ಅವರ ಅಡಿಪಾಯವನ್ನೇ ಅಲುಗಾಡಿಸುತ್ತದೆ. ಅವರ ನೈತಿಕ ಅಧಿಕಾರವನ್ನು ಪ್ರಶ್ನಿಸುತ್ತದೆ ಮತ್ತು ವಿಭಜನೆಯ ಮೇಲೆ ಕಟ್ಟಿರುವ ಅವರ ಸಂಪೂರ್ಣ ಚುನಾವಣಾ ನಿರೂಪಣೆಗೆ ಅಡಚಣೆಯಾಗುತ್ತಿದೆ.

ಅನೇಕ ವರ್ಷಗಳಿಂದ, ಸಿದ್ಧಾಂತವನ್ನು ಲೆಕ್ಕಿಸದೆ ರಾಜಕೀಯ ಪಕ್ಷಗಳು ಮೃದು-ಹಿಂದುತ್ವ ಅಳವಡಿಸಿಕೊಂಡಿವೆ, ಅದನ್ನು ಎದುರಿಸಿದರೆ ಮತಗಳನ್ನು ಕಳೆದುಕೊಳ್ಳುತ್ತೇವೆ ಎಂದು ಹೆದರಿ. ಇಂದು, ಅವುಗಳಲ್ಲಿ ಹಲವು ಸನ್ನಿಹಿತ ಅಪಾಯವನ್ನು ಅರಿತುಕೊಳ್ಳುತ್ತಿವೆ. ಮನುಸ್ಮೃತಿಯ ಮನಸ್ಥಿತಿಯು ನಿಧಾನವಾಗಿ ಆದರೆ ಬಲವಾಗಿ ನಮ್ಮ ಸಾಮಾಜಿಕ ವ್ಯವಸ್ಥೆಯನ್ನು ನಾಶ ಮಾಡುತ್ತಾ, ಕೆಲವೇ ಜನರು ಮನಸ್ಸು , ಜನಸಮೂಹ ಮತ್ತು ಹಣವನ್ನು (, , ) ಸಲೀಸಾಗಿ ವಶಪಡಿಸಿಕೊಳ್ಳಲು ಸಹಾಯ ಮಾಡುವ ವ್ಯವಸ್ಥೆಗಳನ್ನು ಮತ್ತೆ ಬಲಪಡಿಸುತ್ತಿದೆ.

ಇಂದು ಪಿತೃಪ್ರಭುತ್ವದ ಬಗ್ಗೆ ಅತ್ಯಂತ ಅಪಾಯಕಾರಿ ವಿಷಯವೆಂದರೆ ಅದು ಇನ್ನು ಮುಂದೆ ಕೇವಲ ಪುರುಷ ಮಹಿಳೆಯ ಬಗ್ಗೆ ಅಲ್ಲ. ಅದರ ಹೊಸ ಅವತಾರದಲ್ಲಿ, ಪಿತೃಪ್ರಭುತ್ವವು ಸ್ವತಃ ಲಿಂಗ ತಟಸ್ಥವಾಗಿದೆ. ಎಲ್ಲವನ್ನೂ ನಿರ್ದೇಶಿಸುವ ಅದೃಶ್ಯ ಚೌಕಟ್ಟಾಗಿದೆ, ಸಾಮಾಜಿಕ ವ್ಯವಸ್ಥೆ, ನಾವು ಯಾವ ನೈತಿಕತೆಯನ್ನು ಅನುಸರಿಸಬೇಕು, ನಾವು ಯಾವ ಬಣ್ಣವನ್ನು ಧರಿಸಬೇಕು, ನಾವು ಯಾವ ಆಹಾರವನ್ನು ತಿನ್ನಬೇಕು, ನಾವು ಯಾವ ಭಾಷೆಯನ್ನು ಮಾತನಾಡಬೇಕು. ಇದೇ ಅದೃಶ್ಯ ಚೌಕಟ್ಟು ದ್ವೇಷವನ್ನು ಹರಡಿ, ಅಲ್ಪಸಂಖ್ಯಾತರು ಮತ್ತು ಮಹಿಳೆಯರ ವಿರುದ್ಧ ಹಿಂಸೆಯನ್ನು ಪ್ರೇರೇಪಿಸುತ್ತದೆ, ಅಂತಿಮವಾಗಿ 100 ವರ್ಷಗಳ ಹಿಂದೆ ಬಾಬಾಸಾಹೇಬ್ ಸುಟ್ಟ ಮನುಸ್ಮೃತಿಯ ಉದ್ದೇಶಗಳನ್ನು ಸಾಮಾನ್ಯಗೊಳಿಸುತ್ತದೆ.

ಪಿತೃಪ್ರಭುತ್ವವನ್ನು ಧ್ವಂಸ ಮಾಡುವುದು ಖಂಡಿತವಾಗಿಯೂ ಪುರುಷರನ್ನು ಅಥವಾ ನಮ್ಮ ಸಮಾಜವನ್ನು ದ್ವೇಷಿಸುವುದು ಅಲ್ಲ. ಪಿತೃಪ್ರಭುತ್ವವನ್ನು ಧ್ವಂಸ ಮಾಡುವುದು ಅನ್ಯಾಯ, ಬಡತನ, ಹಿಂಸೆ, ಅಸಮಾನತೆ ಮತ್ತು ತಾರತಮ್ಯವನ್ನು ಸಾಮಾನ್ಯಗೊಳಿಸುತ್ತಿರುವ ಸಾಮಾಜಿಕ ವ್ಯವಸ್ಥೆಯನ್ನು ಪ್ರಶ್ನಿಸುವುದು, ಮತ್ತು ನಾವು ಅದನ್ನು ನಿರಂತರ ಪ್ರತಿರೋಧದ ಮೂಲಕ, ಶಿಕ್ಷಣದ ಮೂಲಕ, ನಮ್ಮ ಹಕ್ಕುಗಳನ್ನು ಎತ್ತಿಹಿಡಿಯುವ ಮೂಲಕ, ವೈಯಕ್ತಿಕವಾಗಿ ಮತ್ತು ಪ್ರಗತಿಪರ ಸಮಾಜವಾಗಿ ನಮ್ಮ ಸಾಂವಿಧಾನಿಕ ಮೌಲ್ಯಗಳನ್ನು ಜೀವಿಸುವ ಮೂಲಕ ಪ್ರಶ್ನಿಸುತ್ತೇವೆ.

ಬಂಡಾಯದ ಒಂದು ರೂಪವಾಗಿ ತಂಪನ್ನು () ಆಯ್ಕೆ ಮಾಡಿದ ಕಪುಸಿನೊ () ಪೀಳಿಗೆಯಿಂದ ಹಿಡಿದು, ಈಗ ಪ್ರತಿರೋಧದ ಒಂದು ರೂಪವಾಗಿ ಸ್ವಾಸ್ಥ್ಯ() ಮತ್ತು ಮಾನಸಿಕ ಆರೋಗ್ಯವನ್ನು ( ) ಆಯ್ಕೆ ಮಾಡಿಕೊಂಡಿರುವ ಮಚ್ಚಾ() ಪೀಳಿಗೆಯವರೆಗೆ, ಮಹಿಳೆಯರು ಬಹಳ ಸಮಯದಿಂದ ಪಿತೃಪ್ರಭುತ್ವದ ವಿವಿಧ ಚೌಕಟ್ಟುಗಳು (), ಆದೇಶಗಳು, ಸ್ಥಳಗಳು ಮತ್ತು ಬಣ್ಣಗಳ ವಿರುದ್ಧ ಹೋರಾಡಿದ್ದಾರೆ. ರಾಹುಲ್ ಗಾಂಧಿ ಮಾಡಿರುವುದು ಮುಖ್ಯವಾಗಿದೆ. ಅವರು ಈ ಎರಡು ಪೀಳಿಗೆಯ ಮಹಿಳೆಯರೊಂದಿಗೆ ಯಶಸ್ವಿಯಾಗಿ ತೊಡಗಿಸಿಕೊಂಡಿದ್ದಾರೆ. ಪಿತೃಪ್ರಭುತ್ವದ ಚರ್ಚೆಯನ್ನು ಡ್ರಾಯಿಂಗ್ ರೂಮ್‌ಗಳು ಮತ್ತು ಸೆಮಿನಾರ್‌ಗಳಿಂದ ರಾಜಕೀಯ ನಿರೂಪಣೆಯ ಕೇಂದ್ರಕ್ಕೆ ತರುವ ಮೂಲಕ, ಅವರು ಬಹಳ ಸಮಯದಿಂದ ಅನೇಕ ರಾಜಕೀಯ ನಾಯಕರು ದೂರ ಸರಿದಿದ್ದ ವಿಷಯವನ್ನು ಪ್ರಸ್ತಾಪಿಸಿದ್ದಾರೆ.

ಬಾಬಾಸಾಹೇಬ್ ಅಂಬೇಡ್ಕರ್ ಅವರು ಹೇಳಿದರು, ''ಇತಿಹಾಸವನ್ನು ಮರೆಯುವವರು ಇತಿಹಾಸವನ್ನು ಸೃಷ್ಟಿಸಲು ಸಾಧ್ಯವಿಲ್ಲ''. ಪ್ರಪಂಚದಾದ್ಯಂತದ ಫ್ಯಾಸಿಸ್ಟ್ ಸರ್ಕಾರಗಳು ಹಿಂದುಳಿದ ಸಾಮಾಜಿಕ ವ್ಯವಸ್ಥೆ ಮತ್ತು ಕ್ರೋನಿ ಬಂಡವಾಳಶಾಹಿಯಿಂದ ತಮ್ಮ ಶಕ್ತಿಯನ್ನು ಪಡೆದಿವೆ ಎಂದು ಇತಿಹಾಸವು ನಮಗೆ ಸ್ಪಷ್ಟವಾಗಿ ಹೇಳುತ್ತದೆ, ಒಂದನ್ನು ಬಳಸಿ ಇನ್ನೊಂದನ್ನು ಬಲಪಡಿಸಿದರು. ಒಂದು ರಾಷ್ಟ್ರವಾಗಿ, ನಮಗೆ ಆಯ್ಕೆ ಇದೆ. ನಾವು ಇತಿಹಾಸದ ನೋವಿನ ಕಲಿಕೆಯ ರೇಖೆಯನ್ನು ( ) ಬಿಟ್ಟುಬಿಡಬಹುದು, ಅಥವಾ ನಾವು ಅದನ್ನು ಪುನರಾವರ್ತಿಸಬಹುದು. ಅದನ್ನು ಬಿಟ್ಟುಬಿಡಲು, ನಾವು ಪ್ರತಿರೋಧಿಸಬೇಕು, ಫ್ಯಾಸಿಸಂ ಅನ್ನು ಪ್ರತಿರೋಧಿಸುವ ಮೊದಲ ಹೆಜ್ಜೆ ಅದಕ್ಕೆ ಶಕ್ತಿ ನೀಡುವ ಪಿತೃಪ್ರಭುತ್ವವನ್ನು ಧ್ವಂಸ ಮಾಡುವುದು.

# ಜನಸಂಖ್ಯಾ ಸಮಿತಿಯ ‘ಧರ್ಮ ಆಧಾರಿತ’ ಪ್ರಶ್ನೆಗಳಿಗೆ ಉತ್ತರಿಸಲಾಗದೆ ರಾಜ್ಯ ಸರ್ಕಾರಗಳ ಪರದಾಟ

ಜನಸಂಖ್ಯಾ ಬದಲಾವಣೆಗಳ ಕುರಿತು ಅಧ್ಯಯನ ನಡೆಸುತ್ತಿರುವ ಉನ್ನತ ಮಟ್ಟದ ಸಮಿತಿಯು () ಕೇಳಿರುವ ಧರ್ಮವಾರು ಮಾಹಿತಿಗೆ ಉತ್ತರಿಸಲಾಗದೆ ರಾಜ್ಯ ಸರ್ಕಾರಗಳು ಕಂಗಾಲಾಗಿವೆ. ಸರ್ಕಾರಿ ಇಲಾಖೆಗಳು ಸಾಮಾನ್ಯವಾಗಿ ಧರ್ಮದ ಆಧಾರದ ಮೇಲೆ ಇಂತಹ ದತ್ತಾಂಶವನ್ನು ನಿರ್ವಹಿಸದಿರುವುದೇ ಇದಕ್ಕೆ ಕಾರಣವಾಗಿದೆ.

ಅಕ್ರಮ ವಲಸೆ ಮತ್ತು ಇತರ ಅಸಹಜ ಕಾರಣಗಳಿಂದ ಉಂಟಾಗುತ್ತಿರುವ ಜನಸಂಖ್ಯಾ ಬದಲಾವಣೆಗಳನ್ನು ಅಧ್ಯಯನ ಮಾಡಲು ಹಾಗೂ ಇವುಗಳನ್ನು ನಿಭಾಯಿಸಲು ಸೂಕ್ತ ಕ್ರಮಗಳನ್ನು ಸೂಚಿಸಲು ಕೇಂದ್ರ ಗೃಹ ಸಚಿವಾಲಯವು ಮೇ 26ರಂದು ಸುಪ್ರೀಂ ಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಪ್ರಕಾಶ್ ಪ್ರಭಾಕರ್ ನಾವ್ಲೇಕರ್ ನೇತೃತ್ವದಲ್ಲಿ ಈ ಸಮಿತಿಯನ್ನು ರಚಿಸಿತ್ತು. ಕಳೆದ 15 ವರ್ಷಗಳ ಜನನ ಮತ್ತು ವಾಹನ ನೋಂದಣಿ, ಶಾಲಾ ದಾಖಲಾತಿ, ಆಸ್ತಿ ವಹಿವಾಟು, ಜೊತೆಗೆ ಜಿಲ್ಲಾವಾರು ಧಾರ್ಮಿಕ ಕಟ್ಟಡಗಳು, ಹಾಗೂ ಆಧಾರ್, ಚುನಾವಣಾ ಗುರುತಿನ ಚೀಟಿ ಮತ್ತು ಪಡಿತರ ಚೀಟಿ ನೋಂದಣಿಯಲ್ಲಿನ ಅಸಾಮಾನ್ಯ ಏರಿಕೆಯ ಕುರಿತು ಸಮಿತಿಯು ಧರ್ಮವಾರು ದತ್ತಾಂಶವನ್ನು ಕೇಳಿದೆ. ಹಿಂದೂ, ಸಿಖ್, ಕ್ರಿಶ್ಚಿಯನ್, ಮುಸ್ಲಿಂ, ಪಾರ್ಸಿ ಮತ್ತು ಬೌದ್ಧ ಧರ್ಮದವರ ಕುರಿತಾಗಿ ಎಲ್ಲಾ ವಿಭಾಗಗಳಲ್ಲಿ ಮಾಹಿತಿ ನೀಡುವಂತೆ ರಾಜ್ಯಗಳಿಗೆ ಸೂಚಿಸಲಾಗಿದೆ.



### ದತ್ತಾಂಶ ನೀಡಲು ಸಾಂವಿಧಾನಿಕ ತೊಡಕು

ಸಮಿತಿಯು ಕೇಳಿರುವ 35 ಪ್ರಶ್ನೆಗಳಿಗೆ ಉತ್ತರಿಸುವುದು ಕಷ್ಟಕರವಾಗಿದೆ; ಏಕೆಂದರೆ ಸಂವಿಧಾನದ ಜಾತ್ಯತೀತ ರಚನೆಯು ಧಾರ್ಮಿಕ ವರ್ಗಗಳ ಅಡಿಯಲ್ಲಿ ದತ್ತಾಂಶ ಸಂಗ್ರಹಿಸುವುದನ್ನು ನಿರ್ಬಂಧಿಸಿದೆ ಎಂದು ರಾಜ್ಯ ಸರ್ಕಾರದ ಅಧಿಕಾರಿಗಳು ಮಾಧ್ಯಮಗಳಿಗೆ ತಿಳಿಸಿದ್ದಾರೆ. ಮಗುವಿನ ಧರ್ಮವನ್ನು ನಮೂದಿಸುವ ಜನನ ನೋಂದಣಿ ಪ್ರಮಾಣಪತ್ರ, ಬಂಧಿತರಾದ ಅಥವಾ ಗಡೀಪಾರಾದ ದಾಖಲೆರಹಿತ ವಲಸಿಗರನ್ನು ಹೊರತುಪಡಿಸಿ, ಇತರ ಯಾವುದೇ ವಿಭಾಗಗಳಲ್ಲಿ ಧರ್ಮವಾರು ದತ್ತಾಂಶ ಲಭ್ಯವಿಲ್ಲ ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

### ಸಾಚಾರ್ ಸಮಿತಿಯ ಉಲ್ಲೇಖ

2005ರಲ್ಲಿ ಅಂದಿನ ಕಾಂಗ್ರೆಸ್ ನೇತೃತ್ವದ ಯುಪಿಎ () ಸರ್ಕಾರವು ಮುಸ್ಲಿಂ ಸಮುದಾಯದ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಯನ್ನು ಪರಿಶೀಲಿಸಲು ಸಾಚಾರ್ ಸಮಿತಿಯನ್ನು ನೇಮಿಸಿತ್ತು. 2006ರಲ್ಲಿ ಪ್ರಮುಖ ಪ್ರತಿಪಕ್ಷವಾಗಿದ್ದ ಭಾರತೀಯ ಜನತಾ ಪಾರ್ಟಿ (), ಸಾಚಾರ್ ಸಮಿತಿಯ ಶಿಫಾರಸುಗಳನ್ನು ವಿರೋಧಿಸಿತ್ತು ಮತ್ತು ಇದು ಧಾರ್ಮಿಕ ಕೋಟಾವನ್ನು ಉತ್ತೇಜಿಸುತ್ತದೆ ಹಾಗೂ ಸಾಮಾಜಿಕ ವಿಭಜನೆಗೆ ಕಾರಣವಾಗುತ್ತದೆ ಎಂದು ಹೇಳುವ ಮೂಲಕ ಅದರ ಸಾಂವಿಧಾನಿಕ ಸಿಂಧುತ್ವವನ್ನು ಪ್ರಶ್ನಿಸಿತ್ತು.

### ಮತಾಂತರ ಹಾಗೂ ಶಾಲಾ ದಾಖಲಾತಿ ಬಗ್ಗೆ ಪ್ರಶ್ನೆ

ಪರಿಶಿಷ್ಟ ಪಂಗಡಗಳ () ಸಮುದಾಯಗಳಲ್ಲಿ ನಡೆಯುವ ಧಾರ್ಮಿಕ ಮತಾಂತರಗಳ ಕುರಿತಾದ ಗುಪ್ತಚರ ವರದಿಗಳು, ಕಾರ್ಯಾಚರಣೆಯಲ್ಲಿರುವ ಡಿಟೆನ್ಷನ್ ಸೆಂಟರ್‌ಗಳ (ಬಂಧಿಖಾನೆಗಳು) ವಿವರಗಳನ್ನು ಸಹ ಸಮಿತಿ ಕೇಳಿದೆ. ಐತಿಹಾಸಿಕ ಜನನ ದರಗಳಿಗೆ ಅಸಂಗತವಾಗಿರುವ, ಅಸಾಮಾನ್ಯ ಶಾಲಾ ದಾಖಲಾತಿಯ ಪ್ರವೃತ್ತಿಗಳನ್ನು ತೋರಿಸುವ ಜಿಲ್ಲೆಗಳ ವಿವರಗಳು ಮತ್ತು ಅದಕ್ಕೆ ಕಾರಣಗಳನ್ನು ಸಮಿತಿ ಪ್ರಶ್ನಿಸಿದೆ. ಕಳೆದ 15 ವರ್ಷಗಳಲ್ಲಿ ಸ್ಥಾಪಿಸಲಾದ ಧಾರ್ಮಿಕ ಕಟ್ಟಡಗಳ (ದೇವಾಲಯಗಳು, ಮಸೀದಿಗಳು, ಚರ್ಚ್‌ಗಳು ಇತ್ಯಾದಿ) ಜಿಲ್ಲಾವಾರು ದತ್ತಾಂಶವನ್ನು, ಹಾಗೂ ಅವುಗಳನ್ನು ಗುರುತಿಸಲು ಬಳಸಿದ ಜಿಐಎಸ್ () ಮ್ಯಾಪಿಂಗ್ ತಂತ್ರಜ್ಞಾನದ ವಿವರಗಳನ್ನೂ ಕೇಳಿದೆ.

### ಚುನಾವಣಾ ಆಯೋಗದಿಂದ ಸಿಗದ ದತ್ತಾಂಶ

ಬಿಹಾರದಲ್ಲಿ ನಡೆದಿದ್ದ ವಿಶೇಷ ತೀವ್ರ ಪರಿಷ್ಕರಣೆ ( ) ಪ್ರಕ್ರಿಯೆಯನ್ನು ಮೇ 27ರಂದು ಎತ್ತಿಹಿಡಿದಿದ್ದ ಸುಪ್ರೀಂ ಕೋರ್ಟ್, ಮತದಾರರ ಪಟ್ಟಿಗೆ ಸೇರ್ಪಡೆ ಅಥವಾ ಪಟ್ಟಿಯಿಂದ ಕೈಬಿಡುವ ವಿಚಾರಕ್ಕೆ ಸೀಮಿತವಾಗಿ ಪೌರತ್ವವನ್ನು ಪರಿಶೀಲಿಸುವ ಅಧಿಕಾರ ಚುನಾವಣಾ ಆಯೋಗಕ್ಕೆ ಇದೆ ಎಂದು ಹೇಳಿತ್ತು. 2003ರ ಮತದಾರರ ಪಟ್ಟಿಯಲ್ಲಿದ್ದು, ಆ ಬಳಿಕ ಪೌರತ್ವ ಹೊಂದಿಲ್ಲದ ಕಾರಣಕ್ಕಾಗಿ ಬಿಹಾರದ ಎಸ್‌ಐಆರ್ () ಪ್ರಕ್ರಿಯೆ ವೇಳೆ ಕೈಬಿಡಲ್ಪಟ್ಟವರ ಹೆಸರುಗಳನ್ನು 1955ರ ಪೌರತ್ವ ಕಾಯ್ದೆಯಡಿ ಸಕ್ಷಮ ಪ್ರಾಧಿಕಾರದ ತೀರ್ಮಾನಕ್ಕಾಗಿ ಮುಂದಿನ ನಾಲ್ಕು ವಾರಗಳೊಳಗೆ ಕೇಂದ್ರಕ್ಕೆ ಕಳುಹಿಸುವಂತೆ ನ್ಯಾಯಾಲಯವು ಚುನಾವಣಾ ಆಯೋಗಕ್ಕೆ ನಿರ್ದೇಶಿಸಿತ್ತು.

ಆದರೆ ಚುನಾವಣಾ ಆಯೋಗವು ಈ ದತ್ತಾಂಶವನ್ನು ಇನ್ನೂ ಸಮಿತಿಗೆ ಒದಗಿಸಿಲ್ಲ ಎಂದು ಸರ್ಕಾರದ ಮೂಲಗಳು ತಿಳಿಸಿವೆ. ''ನಮಗೆ ಇನ್ನೂ ರಾಜ್ಯ ಸರ್ಕಾರಗಳಿಂದ ಪ್ರತಿಕ್ರಿಯೆ ಬಂದಿಲ್ಲ. ಚುನಾವಣಾ ಆಯೋಗದ ಅಧಿಕಾರಿಗಳೊಂದಿಗೆ ಕಳೆದ ವಾರ ಸಭೆ ನಡೆಸಲಾಗಿದೆ. ಆದರೆ ಅಕ್ರಮವಾಗಿ ನೆಲೆಸಿರುವ ಶಂಕಿತ ವಿದೇಶಿ ಪ್ರಜೆಗಳೆಂಬ ಕಾರಣಕ್ಕೆ ಎಸ್‌ಐಆರ್‌ನಿಂದ () ಹೊರಗಿಡಲಾದ ಜನರ ದತ್ತಾಂಶವನ್ನು ಅವರು ಇನ್ನೂ ಒದಗಿಸಿಲ್ಲ,'' ಎಂದು ಸಮಿತಿಯ ಸದಸ್ಯರೊಬ್ಬರು ಅನಾಮಧೇಯತೆಯ ಷರತ್ತಿನ ಮೇರೆಗೆ ತಿಳಿಸಿದ್ದಾರೆ. ದತ್ತಾಂಶ ಸಲ್ಲಿಕೆಯಲ್ಲಿನ ವಿಳಂಬದ ಕಾರಣಗಳ ಕುರಿತಾದ ಪ್ರಶ್ನೆಗಳಿಗೆ ಚುನಾವಣಾ ಆಯೋಗವು ಪ್ರತಿಕ್ರಿಯಿಸಿಲ್ಲ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR